# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 155 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 02–01–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 01 Issue - 155 | Title- Code: KARKAN 28269 | Chitradurga | Date: 02-01-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಹಿಡಿಯಲದ್ದಾರೆ ಮತದಾರರು: ಆಂಜನೇಯ 2

ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ಕುರಿತು ತರಬೇತಿ ಕಾರ್ಯಕ್ರಮ 3

ಹಿರಿಯೂರು ನಗರದ ಸಾರ್ವಜನಿಕ ಶೌಚಾಲಯಗಳಿಗೆ ಹೈಟೆಕ್ ಸ್ಪರ್ಶ 4



ಸುದ್ದಿ, ಜಾಹಿರಾತಿಗೆ 9686622252


## ಶುಭ ನುಡಿ

ತಾಯಿಯ ಪಾದದಲ್ಲಿ ಇರುವ ದಿವ್ಯ ಲೋಕವೇ ಸ್ವರ್ಗ,,, ತಾಯಿಯನ್ನ ಜೋಪಾನವಾಗಿ ನೋಡಿಕೊಂಡರೆ ಸ್ವರ್ಗವೆಂಬುದು ನಿಮ್ಮ ಮನೆಯಲ್ಲಿಯೇ ಇರುತ್ತದೆ

» ಶುಭೋದಯ

## ಫಾಸ್ಟ್ ನ್ಯೂಸ್

### ಚಿತ್ರದುರ್ಗ ಜಿಲ್ಲೆಯಲ್ಲಿ ಒಬ್ಬರಿಗೆ ಕೋವಿಡ್ ದೃಢ

» ಚಿತ್ರದುರ್ಗ

ಕೋಟೆ ನಾಡಿನಲ್ಲಿ ಕೋವಿಡ್ ಅಲ್ಲಲ್ಲಿ ಕಾಣಿಸುತ್ತಿದೆ. ಜಿಲ್ಲೆಯಲ್ಲಿ ಇಂದು ಒಬ್ಬರಿಗೆ ಕೋವಿಡ್ ಸೋಂಕು ಪತ್ತೆಯಾಗಿದ್ದು.ಇಂದು ಒಬ್ಬರಿಗೆ ಕೋವಿಡ್ ದೃಢವಾಗಿದೆ.

**ಜಿಲ್ಲೆಯ ಮಾಹಿತಿ**

| ತಾಲೂಕು | ಪ್ರಕರಣ |
|---|---|
| ಚಿತ್ರದುರ್ಗ | 0 |
| ಚಳ್ಳಕೆರೆ | 0 |
| ಮೊಳಕಾಲ್ಮೂರು | 0 |
| ಹೊಸದುರ್ಗ | 0 |
| ಹಿರಿಯೂರು | 0 |
| ಹೊಳಲ್ಕೆರೆ | 1 |



ಮಾಸ್ಕ್ ಧರಿಸಿ | ದೈಹಿಕ ಅಂತರ ಪಾಲಿಸಿ | ಕೈಗಳ ಸ್ವಚ್ಛತೆ ಕಾಪಾಡಿಕೊಳ್ಳಿ

### ತ್ಯಾಜ್ಯಕ್ಕೆ ಬೆಂಕಿ; ವಾಹನ ಸವಾರರು ಕಂಗಾಲು

» ಚಿತ್ರದುರ್ಗ

ನಗರದ ಹೊರವಲಯದಲ್ಲಿ ತ್ಯಾಜ್ಯಕ್ಕೆ ಬೆಂಕಿ ಇಟ್ಟಿದ್ದು ದಟ್ಟ ಹೊಗೆಗೆ ವಾಹನ ಸವಾರರು ಕಂಗಾಲಾಗಿದ್ದಾರೆ. ಚಿತ್ರದುರ್ಗದ ಹೊರವಲಯದ ಕುಂಚಿಗನಹಾಳ್ ಗ್ರಾಮದ ರಸ್ತೆಯ ಪಕ್ಕದ ಕೈಗಾರಿಕಾ ಪ್ರದೇಶದ ಬಳಿ ಎಲ್ಲಂದರಲ್ಲಿ ತ್ಯಾಜ್ಯಗಳನ್ನು ಎಸೆಯಲಾಗಿದೆ. ಸಧ್ಯ ತ್ಯಾಜ್ಯಗಳಿಗೆ ಕಿಡಿಗೇಡಿಗಳು ಬೆಂಕಿ ಇಟ್ಟಿದ್ದು, ದಟ್ಟ ಹೊಗೆ ಆವರಿಸಿ ವಾಹನ ಸವಾರರು ಪರದಾಡಬೇಕಾಗಿದೆ. ಇದರ ಜೊತೆ ಕೆಮಿಕಲ್ ಪ್ಲೈಉಡ್ ಕಂಪನಿ ತ್ಯಾಜ್ಯವನ್ನ ತಂದು ರಸ್ತೆಯ ಪಕ್ಕ ಎಸೆಯಲಾಗಿದೆ. ಇದಕ್ಕೆ ಕಿಡಿಗೇಡಿಗಳು ಬೆಂಕಿ ಹಾಕಿದ್ದು, ವಾತಾವರಣ ಹಾಳಾಗುತ್ತೆ ಎನ್ನುವ ಆತಂಕ ಎದುರಾಗಿದೆ. ಬೆಂಕಿಯ ಕೆನ್ನಾಲಿಗೆ ಚಾಚಿ ಬಾನೆತ್ತರಕ್ಕೆ ದಟ್ಟ ಹೊಗೆ ಆವರಿಸಿದೆ. ಇನ್ನು ದಟ್ಟ ಹೊಗೆಗೆ ಈ ಮಾರ್ಗದ ಮೂಲಕ ಸಾಗಲು ವಾಹನ ಸವಾರರು ಪರದಾಡಬೇಕಾಯಿತು. ಇನ್ನು ಪಕ್ಕದಲ್ಲೇ ವಿದ್ಯುತ್ ಸರಬರಾಜು ಯೂನಿಟ್ ಹಾಗೂ ರೈತರ ಜಮೀನು ಕೂಡ ಇದ್ದು, ಅನಾಹುತ ಆದ್ರೆ ಯಾರು ಹೊಣೆ ಅಂತಾ ರೈತರು ಆತಂಕ ವ್ಯಕ್ತಪಡಿಸಿದ್ದಾರೆ.

### ಜ.06, 07ರಂದು ಬಳ್ಳಾರಿಯಲ್ಲಿ ರಾಜ್ಯ ಮಟ್ಟದ ಯುವಜನೋತ್ಸವ

» ಚಿತ್ರದುರ್ಗ

2023–24ನೇ ಸಾಲಿನ ರಾಜ್ಯ ಮಟ್ಟದ ಯುವಜನೋತ್ಸವ ಸ್ಪರ್ಧೆಯನ್ನು ಇದೇ ಜನವರಿ 06 ಮತ್ತು 7ರಂದು ಬಳ್ಳಾರಿ ಜಿಲ್ಲಾ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ. 2023ರ ಡಿಸೆಂಬರ್ 7ರಂದು ಚಿತ್ರದುರ್ಗ ಸರ್ಕಾರಿ ಕಲಾ ಕಾಲೇಜಿನಲ್ಲಿ ನಡೆದ ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದವರು ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ. ರಾಜ್ಯಮಟ್ಟದ ಯುವಜನೋತ್ಸವ ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಾಳುಗಳು ಜ.06ರಂದು ಬೆಳಿಗ್ಗೆ 10 ಗಂಟೆಗೆ ವರದಿ ಮಾಡಿಕೊಳ್ಳಲು ತಿಳಿಸಲಾಗಿದೆ. ಸ್ಪರ್ಧಾಳುಗಳು ಲಘು ಹಾಸಿಗೆ, ಹೊದಿಕೆ ಬೀಗ ಬೀಗದ ಕೈಯನ್ನು ತೆಗೆದುಕೊಂಡು ಹೋಗತಕ್ಕದ್ದು. ಸ್ಪರ್ಧಾಳುಗಳಿಗೆ ಚಿತ್ರದುರ್ಗದಿಂದ ಬಳ್ಳಾರಿ ಜಿಲ್ಲೆಗೆ ಹೋಗಿಬರುವ ಪ್ರಯಾಣ ಭತ್ಯೆ ಹಾಗೂ ಊಟೋಪಹಾರ, ವಸತಿ ವ್ಯವಸ್ಥೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 08194–235635ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಏಳು ಸುತ್ತಿನ ಕೋಟೆಯ ಕಲ್ಲು ಕಲ್ಲಿನಲಿ ಹೊಸ ವರ್ಷ ಸಂಭ್ರಮ

# ಹೊಸ ವರ್ಷಕ್ಕೆ ಪ್ರವಾಸಿಗರ ಲಗ್ಗೆ

» ಚಿತ್ರದುರ್ಗ

ಹೊಸತನ ಹೊಸದಿನದ ಆಚರಣೆಗೆ ಪ್ರವಾಸಿ ತಾಣಗಳಿಗೆ ತೆರಳುತ್ತಾರೆ. ಯುವ ಸಮೂಹ ಮೈಮರೆತು ಹೊಸ ವರ್ಷ ಆಚರಣೆ ಸಂಭ್ರಮಿಸುತ್ತಾರೆ.

ಹೌದಕೋಟೆನಾಡಿನಪ್ರವಾಸಿತಾಣಗಳಲ್ಲಿ ಒಂದಾದ ಏಳು ಸುತ್ತಿನ ಕೋಟೆಗೆ ಯುವ ಸಮುದಾಯ ಸೋಮವಾರ ಲಗ್ಗೆ ಇಟ್ಟಿತು.. ಏಳು ಸುತ್ತಿನ ಕೋಟೆ, ಆಡುಮಲ್ಲೇಶ್ವರ, ಜೋಗಿಮಟ್ಟಿ, ಮುರುಘಾವನ ಸೇರಿ ಜಿಲ್ಲೆಯ ಪ್ರವಾಸಿ ತಾಣಗಳಲ್ಲಿ ಕೇಕ್ ಕತ್ತರಿಸಿ ಕೈ ಕೈ ಹಿಡಿದುಕೊಂಡು ಒಬ್ಬರಿಗೊಬ್ಬರು ಕೇಕ್ ತಿನಿಸುವ ಮೂಲಕ ಹೊಸ ವರ್ಷ ಸಂಭ್ರಮಾಚರಿಸಲಾಯಿತು.


ನಗರದ ಏಳು ಸುತ್ತಿನ ಕೋಟೆಗೆ ಬೆಳಗ್ಗೆ 10 ಗಂಟೆಯಿಂದಲೇ ಪ್ರವಾಸಿಗರು ಆಗಮಿಸಿದರು. ಸೂರ್ಯ ನೆತ್ತಿಯ ಮೇಲೆ ಬರುವಷ್ಟರಲ್ಲಿ ಪ್ರವಾಸಿಗರ ಸಂಖ್ಯೆ ಭಾರೀ ಹೆಚ್ಚಳವಾಯಿತು. ಇದರಿಂದ ಕೋಟೆಯ ಒಳಗೆ ಎಲ್ಲಿ ಕಣ್ಣಾಯಿಸಿದರು ಸಹ ಯುವ ಸಮೂಹ, ಪ್ರವಾಸಿಗರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಕಂಡು ಬಂದರು.

ಕಳೆದ ಬಾರಿಗಿಂತ ಹೆಚ್ಚಿನ ಪ್ರವಾಸಿಗರು ಆಗಮಿಸಿದ್ದರು.ಇದನ್ನೂ ಮೊದಲೇ ಅರಿತಿದ್ದ ಪುರಾತತ್ವ ಇಲಾಖೆ ಸೋಮವಾರ ಪ್ರತ್ಯೇಕ್ ಟಿಕೆಟ್ ವ್ಯವಸ್ಥೆ , ಕೋಟೆ ಮುಂಭಾಗದಲ್ಲಿ ಬ್ಯಾರಿಕೇಡ್ ಮತ್ತು ಪೋಲ್ ಹಾಕುವ ಮೂಲಕ ಕ್ಯೂ ನಲ್ಲಿ ಒಳ ಪ್ರವೇಶಿಸಲು ವ್ಯವಸ್ಥೆ ಮಾಡಲಾಗಿತ್ತು. ಎಲ್ಲಿಯೂ ನೂಕುನುಗ್ಗಲು ಆಗದಂತೆ ಕ್ರಮವಹಿಸಿತ್ತು. ಸಕಲ ಸಿದ್ದತೆ ನಡೆಸಿದರು ಪ್ರವಾಸಿಗರು ಸಾಗದಂತೆ ಹರಿದು ಬಂದರು. ತಂಡೋಪತಂಡವಾಗಿ ಕೋಟೆ ಪ್ರವೇಶಿಸಿದ ಸಾವಿರಾರು ಪ್ರವಾಸಿಗರು ಮದ್ದುಬೀಸುವ ಕಲ್ಲು, ಒಂಟಿಕಲ್ಲುಬಸವಣ್ಣ, ಬಂದಿಖಾನೆ, ತುಪ್ಪದ ಕೊಳ, ಏಕನಾಥೇಶ್ವರಿ, ಬನಶಂಕರಿ, ಹಿಡಂಬೇಶ್ವರ, ಸಂಪಿಗೆ ಸಿದ್ದೇಶ್ವರ, ಬೆಟ್ಟದ ಗಣಪತಿ, ಗೋಪಾಲಕೃಷ್ಣ ಸ್ವಾಮಿ ದೇವಸ್ಥಾನ, ಒನಕೆ ಓಬವ್ವ ಕಿಂಡಿ ಸೇರಿದಂತೆ ಮೇಲುದುರ್ಗದ ನಾನಾ ಪ್ರದೇಶಗಳಿಗೆ ಭೇಟಿ ನೀಡಿ ಹೊಸ ವರ್ಷವನ್ನು ಅದ್ದೂರಿಯಾಗಿ ಬರಮಾಡಿಕೊಂಡರು.

ಬಳ್ಳಾರಿ, ದಾವಣಗೆರೆ, ಶಿವಮೊಗ್ಗ, ಬೆಂಗಳೂರು, ಮೈಸೂರು, ತುಮಕೂರು, ಚಿಕ್ಕಮಗಳೂರು, ಸೇರಿ ರಾಜ್ಯದ ವಿವಿಧ ಭಾಗಗಳಿಂದ ಪ್ರವಾಸಿಗರು ಆಗಮಿಸಿದ ಕೋಟೆ ಸೌಂದರ್ಯವನ್ನು ಸವಿದರು.

ಕೋಟೆಗೆ ತಂಡೋಪ ತಂಡವಾಗಿ ಭೇಟಿ ನೀಡಿದ ಸಾರ್ವಜನಿಕರು ಕೇಕ್ ಕತ್ತರಿಸಿ ನೂತನ ವರ್ಷ ಬರಮಾಡಿಕೊಂಡರು. ಪ್ರವಾಸಿಗರು ಕೋಟೆಯ ನಾನಾ ಸ್ಥಳಗಳಲ್ಲಿ ಸೆಲ್ಫಿ ತೆಗೆದುಕೊಂಡು ಸಂಭ್ರಮಿಸಿದರು.





## ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ

» ಹೊಳಲ್ಕೆರೆ

ಕಾಯಕವೆ ಕೈಲಾಸ ಎನ್ನುವ ತತ್ವದಡಿ ಅಮರಶಿಲ್ಪಿ ಜಕಣಾಚಾರಿ ಕೆಲಸ ಮಾಡಿದವರು ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಪಟ್ಟಣದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಲಾಗಿದ್ದ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಹಿಡಿದ ಕೆಲಸವನ್ನು ಚಾಚೂ ತಪ್ಪದೆ ಮಾಡಿ ಮುಗಿಸುತ್ತಿದ್ದ ಮಹಾ ಮೇದಾವಿ ಅಮರಶಿಲ್ಪಿ ಜಕಣಾಚಾರಿ. ಗುಜರಾತ್ ರಾಜ್ಯ ಸೋಮನಾಥಪುರದಲ್ಲಿರುವ ಸೋಮೇಶ್ವರ ದೇವಸ್ಥಾನದಲ್ಲಿಯೂ ಕೆತ್ತನೆ ಕೆಲಸ ಮಾಡಿದ ಜಕಣಾಚಾರಿಯವರಲ್ಲಿದ್ದಂತಕರ್ತವ್ಯಪರಿಪಾಲನೆ ಇತರೆಯವರಿಗೆ ಆದರ್ಶವಾಗಬೇಕು.

ದೇಶದ ಪ್ರಧಾನಿ ಮೋದಿ ಶ್ರೀಮಂತ ಕುಟುಂಬದಿಂದ ಬಂದವರಲ್ಲ. ಸಾಮಾನ್ಯ ಬಡ ಕುಟುಂಬದಲ್ಲಿ ಜನಿಸಿದ ಅವರು ಬಾಲಕನಿದ್ದಾಗ ರೈಲು ನಿಲ್ದಾಣದಲ್ಲಿ ಚಹ ಮಾರುತ್ತಿದ್ದರಿಂದ ದೇಶದ ಬಡ ಜನರ ಕಷ್ಟ ಅರ್ಥಮಾಡಿಕೊಂಡಿದ್ದಾರೆ. ಹಾಗಾಗಿ ವಿಶ್ವಕರ್ಮರ ಅಭಿವೃದ್ದಿಗಾಗಿ ಹದಿಮೂರು ಸಾವಿರ ಕೋಟಿ ರೂ.ಗಳನ್ನು ಬಿಡುಗಡೆಗೊಳಿಸಿ ಎಲ್ಲರಿಗೂ ನ್ಯಾಯ ಒದಗಿಸಿದ್ದಾರೆಂದು ಗುಣಗಾನ ಮಾಡಿದರು.ಸೋಮನಾಥಪುರದ ಸಮುದ್ರದ ಪಕ್ಕದಲ್ಲಿರುವ ಸೋಮೇಶ್ವರ ದೇವಾಲಯದಲ್ಲಿ ಅಮರಶಿಲ್ಪಿ ಜಕಣಾಚಾರಿ ಕೆತ್ತನೆ ಮಾಡುವಾಗ ಘೋರಿ ಮಹಮದ್, ಘಜನಿ ಮಹಮದ್ ಇವರುಗಳು ದಂಡೆತ್ತಿ ಬಂದು ದೇವಸ್ಥಾನದಲ್ಲಿ ಕಟ್ಟಿದ್ದ ಎಂಟುನೂರು ಕೆ.ಜಿ.ತೂಕದ ಬಂಗಾರದ ಗಂಟೆಯನ್ನು ಬಿಚ್ಚಿಕೊಂಡು ಹೋಗುತ್ತಾರೆ. ಆಗ ಜಕಣಾಚಾರಿ ತನ್ನ ಕೆಲಸದಲ್ಲಿ ತಲ್ಲೀನರಾಗಿರುತ್ತಾರೆಯೇ ವಿನಃ ಬೇರೆ ಕಡೆ ಗಮನ ಕೊಡುವುದಿಲ್ಲ. ಅಷ್ಟೊಂದು ಕರ್ತವ್ಯ ಪ್ರಜ್ಞೆಯಿತ್ತು. ವಿಶ್ವಕರ್ಮರು ಕಷ್ಟ ಪಟ್ಟು ಕೆಲಸ ಮಾಡುವ ಜನಾಂಗ ಎಂದು ಶ್ಲಾಘಿಸಿದರು.

ತಹಶೀಲ್ದಾರ್ ಬೀಬಿ ಫಾತಿಮ ಮಾತನಾಡಿ ಅಯೋಧ್ಯೆಯಲ್ಲಿ ನಿರ್ಮಾಣವಾಗುತ್ತಿರುವ ರಾಮಮಂದಿರದಲ್ಲಿ ಕರ್ನಾಟಕದ ವಿಶ್ವಕರ್ಮರು ಕೆಲಸ ಮಾಡಿರುವುದು ನಿಜಕ್ಕೂ ಸಂತೋಷದ ಸಂಗತಿ. ಹೊಳಲ್ಕೆರೆಯಲ್ಲಿರುವ ವಿಶ್ವಕರ್ಮರಿಗೂ ಅಯೋಧ್ಯೆಯಲ್ಲಿ ಕೆಲಸ ಮಾಡುವ ಅವಕಾಶ ಸಿಗಲಿ ಎಂದು ಹಾರೈಸಿದರು.



## ರಾಮ ಮಂದಿರ ಮಂತ್ರಾಕ್ಷತೆ ಮನೆ ಮನೆಗೆ ಹಂಚುವ ಕಾರ್ಯಕ್ರಮಕ್ಕೆ ಮಾಜಿ ಶಾಸಕ ತಿಪ್ಪಾರೆಡ್ಡಿ ಚಾಲನೆ



ಚಿತ್ರದುರ್ಗ : ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆಯಾಗುತ್ತಿರುವುದರಿಂದ ಮನೆ ಮನೆಗೆ ರಾಮಮಂದಿರ ಮಂತ್ರಾಕ್ಷತೆ ಹಂಚುವ ಕಾರ್ಯಕ್ರಮಕ್ಕೆ ಮಾಜಿ ಶಾಸಕ ಜಿ.ಹೆಚ್. ತಿಪ್ಪಾರೆಡ್ಡಿರವರು ಜೆ.ಸಿ.ಆರ್.ನಲ್ಲಿರುವ ಗಣಪತಿ ದೇವಸ್ಥಾನದಲ್ಲಿ ಸೋಮವಾರ ಚಾಲನೆ ನೀಡಿದರು. ದೇಶದ ಪ್ರಧಾನಿ ಮೋದಿರವರ ಕರೆಯಂತೆ ಜ.22 ರಂದು ಪ್ರತಿಯೊಬ್ಬರು ತಮ್ಮ ತಮ್ಮ ಮನೆಯ ಮುಂದೆ ದೀಪವನ್ನು ಹಚ್ಚುವ ಮೂಲಕ ರಾಮಮಂದಿರ ಉದ್ಘಾಟನೆಗೆ ಭಕ್ತಿ ಸಮರ್ಪಿಸಬೇಕೆಂದು ಜನತೆಯಲ್ಲಿ ಮಾಜಿ ಶಾಸಕ ಜಿ.ಹೆಚ್. ತಿಪ್ಪಾರೆಡ್ಡಿ ಮನವಿ ಮಾಡಿದರು.

### ಪ್ರಮುಖ ಸುದ್ದಿ

# ನಾಡಿನ ಶಿಲ್ಪ ಪರಂಪರೆ ಜಗತ್ತಿಗೆ ಸಾರಿದ ಅಮರಶಿಲ್ಪಿ ಜಕಣಾಚಾರಿ: ಉಪವಿಭಾಗಾಧಿಕಾರಿ ಎಂ.ಕಾರ್ತಿಕ್

» ಚಿತ್ರದುರ್ಗ

ನಾಡಿನ ಶಿಲ್ಪ ಪರಂಪರೆಯನ್ನು ಜಗತ್ತಿಗೆ ಸಾರಿದ ಅಮರಶಿಲ್ಪಿ ಜಕಣಾಚಾರಿ, ಶಿಲ್ಪಕಲೆಯಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿ ಅಜರಾಮರವಾಗಿದ್ದಾರೆ ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಹೇಳಿದರು.

ಸೋಮವಾರ ನಗರದ ತರಾಸು ರಂಗಮಂದಿರಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಆಯೋಜಿಸಲಾದ ಅಮರ ಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.ಭಾರತೀಯ ಶಿಲ್ಪಕಲೆ ಕೆತ್ತನೆಗೆ ಸೂಕ್ಷ್ಮ ಕುಸುರಿತನ ತಂದ ಅಮರಶಿಲ್ಪಿ ಜಕಣಾಚಾರಿ, ತಮ್ಮ ಸೃಜನಾತ್ಮಕತೆ ಮೂಲಕ ಉತ್ಕೃಷ್ಟತೆಯನ್ನು ತಲುಪಿದರು. ಕಲ್ಯಾಣದ ಚಾಲುಕ್ಯರು ಹಾಗೂ ಹೊಯ್ಸಳರ ಕಾಲದಲ್ಲಿ ಅವರು ನಿರ್ಮಿಸಿದ ದೇವಾಲಯಗಳು ಇಂದಿಗೂ ಜನರ ಮನಸ್ಸನ್ನು ಸೆಳೆಯುತ್ತಿವೆ. 21ನೇ ಶತಮಾನದ ಸ್ಪರ್ಧಾತ್ಮಕ ಜಗತ್ತಿನಲ್ಲಿ ಸೃಜನಶೀಲತೆ ಅತಿ ಮುಖ್ಯವಾಗಿದೆ. ಕ್ರಿಯಾಶೀಲತೆ ಹಾಗೂ ಸೃಜನಶೀಲತೆ ಇದ್ದವರು ಮಾತ್ರ ಸ್ಪರ್ಧಾತ್ಮಕ ಯುಗದಲ್ಲಿ ಅಭಿವೃದ್ಧಿಯಾಗಲು ಸಾಧ್ಯ ಎಂದು ಅಭಿಪ್ರಾಯ ಪಟ್ಟರು. ಬೆಂಗಳೂರಿನ ಎಂ.ಜಿ. ಸತೀಶ್ ಮುಳ್ಳೂರು ಜಕಣಾಚಾರಿ ಕುರಿತು ಉಪನ್ಯಾಸ ನೀಡಿ, ರಾಷ್ಟ್ರಕವಿ ಕುವೆಂಪು ನಾಡಗೀತೆಯಲ್ಲಿಯೇ ಕನ್ನಡ ನಾಡನ್ನು 'ಡಂಕಣ ಜಕಣರ ನೆಚ್ಚಿನ ಬೀಡು' ಎಂದು ಬಣ್ಣಿಸಿದ್ದಾರೆ. ವಿಶ್ವದಲ್ಲೇ ಬೇಲೂರು ಹಾಗೂ ಹಳೆಬೇಡು ಶಿಲ್ಪಕಲೆಗೆ ಹೆಸರುವಾಸಿಯಾಗಿವೆ. ಭಾರತೀಯ ಶಿಲ್ಪ ಕೆತ್ತನೆಯ ಪರಂಪರೆಯಲ್ಲಿ ಅಮರಶಿಲ್ಪಿ ಜಕಣಾಚಾರಿ ಸ್ಮರಣೀಯರಾಗಿದ್ದಾರೆ. ವಿಶ್ವಕರ್ಮ ಸಮಾಜಕ್ಕೆ ಮಾತ್ರ ಶಿಲ್ಪಿ ಜಕಣಾಚಾರಿ ಸೀಮಿತವಲ್ಲ. ನಾಡಿನ ಪ್ರತಿಯೊಬ್ಬರು ಜಕಣಾಚಾರಿ ಬಗ್ಗೆ ಹೆಮ್ಮೆ ಪಡಬೇಕು ಎಂದರು.





ವಿಶ್ವಕರ್ಮ ಸಮಾಜದ ಜಿಲ್ಲಾಧ್ಯಕ್ಷ ಕೆ.ಟಿ. ಸುರೇಶಾಚಾರ್ಯ ಮಾತನಾಡಿ, ವಿಶ್ವಕರ್ಮ ಸಮಾಜವು ಸಂಘಟನೆಯ ಮೂಲಕ ಒಗ್ಗೂಡಬೇಕಿದೆ. ನಮ್ಮ ಪರಂಪರೆಯನ್ನು ಮುಂದಿನ ಜನಾಂಗಕ್ಕೂ ತಿಳಿಸಬೇಕು ಎಂದರು.

ರಾಂಪುರದ ಶಿಲ್ಪಿ ಮಂಜುನಾಥ ಆಚಾರ್ ಅವರನ್ನು ಸನ್ಮಾನಿಸಲಾಯಿತು. ಕಲಾವಿದ ಉಮೇಶ್ ಪತ್ತಾರ ತಂಡವು ಗೀತ ಗಾಯನ ಪ್ರಸುತಪಡಿಸಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ಎಂ.ಶಂಕರಾಚಾರ್, ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ವಿಕಲಚೇತನರ ಬಸ್‌ಪಾಸ್: ಸೇವಾಸಿಂಧು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

» ಚಿತ್ರದುರ್ಗ

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ 2024ನೇ ಸಾಲಿಗೆ ವಿಕಲಚೇತನರ ರಿಯಾಯಿತಿ ದರದ ಬಸ್‌ಪಾಸ್‌ಗೆ ಹೊಸದಾಗಿ ಹಾಗೂ ನವೀಕರಣಕ್ಕಾಗಿ ಸೇವಾಸಿಂಧು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಸೇವಾಸಿಂಧು ಪೋರ್ಟ್‌ಲ್ https://serviceonline.gov.in/karnatka/ ನಲ್ಲಿ ಹೊಸ ಬಸ್‌ಪಾಸ್‌ಗೆ ವಿಭಾಗೀಯ ನಿಯಂತ್ರಣಾಧಿಕಾರಿ ಹಾಗೂ ನವೀಕರಣಕ್ಕಾಗಿ ಘಟಕ ವ್ಯವಸ್ಥಾಪಕರ ಕೌಂಟರ್ ಐಡಿಗೆ ಅರ್ಜಿ ಸಲ್ಲಿಸಬಹುದು. 2023ನೇ ಸಾಲಿಗೆ ನೀಡಲಾಗಿದ್ದ ಪಾಸುಗಳ ಅವಧಿ ಡಿ.31ಕ್ಕೆ ಮುಕ್ತಾಯವಾಗಿದ್ದು, ಪಾಸುಗಳ ನವೀಕರಣಕ್ಕೆ ಕಾಲವಕಾಶ ನೀಡಿ ಫೆ.29ವರೆಗೆ ಹಳೆ ಪಾಸುಗಳ ಮಾನ್ಯತೆಯನ್ನು ಮುಂದುವರಿಸಲಾಗಿದೆ.

ಆನ್‌ಲೈನ್‌ನಲ್ಲಿ ಯುಡಿಐಡಿ, ಆಧಾರ್, ವಿಕಲಚೇತನ ಪ್ರಮಾಣ ಪತ್ರ ಹಾಗೂ ಫೋಟೋಗಳನ್ನು ಅಪ್‌ಲೋಡ್ ಮಾಡಬೇಕು. ಹೀಗೆ ಆನ್‌ಲೈನ್‌ನಲ್ಲಿ ಅಪೌಲೋಡ್ ಮಾಡಿದ ಮೂಲ ದಾಖಲೆ ಹಾಗೂ ಅವುಗಳ ಜೆರಾಕ್ಸ್ ಪ್ರತಿಗಳನ್ನು ಭೌತಿಕವಾಗಿ ಪಾಸುಗಳನ್ನು ಪಡೆಯುವ ಸಂದರ್ಭದಲ್ಲಿ ಹಾಜರುಪಡಿಸಬೇಕು. ಫೆ.29 ಒಳಗಾಗಿ ಹಳೆಯ ಪಾಸುಗಳ ನವೀಕರಣ ಮಾಡಿಸುವುದು ಕಡ್ಡಾಯವಾಗಿದೆ. ಚಿತ್ರದುರ್ಗ,ಹೊಳಲ್ಕೆರೆ ಹಾಗೂ ಹಿರಿಯೂರು ತಾಲ್ಲೂಕಿನ ಫಲಾನುಭವಿಗಳಿಗೆ ಚಿತ್ರದುರ್ಗ ಬಸ್ ನಿಲ್ದಾಣ, ಚಳ್ಳಕೆರೆ ಮೊಳಕಾಲ್ಮೂರು ಫಲಾನುಭವಿಗಳಿಗೆ ಚಳ್ಳಕೆರೆ ಬಸ್ ನಿಲ್ದಾಣ, ಹೊಸದುರ್ಗ ಫಲಾನುಭವಿಗಳಿಗೆ ಹೊಸದುರ್ಗ ಹಾಗೂ ಪಾವಗಡ ಫಲಾನುಭವಿಗಳಿಗೆ ಪಾವಗಡ ಬಸ್ ನಿಲ್ದಾಣಗಳಲ್ಲಿ ಪಾಸುಗಳನ್ನು ವಿತರಿಸಲಾಗುವುದು ಎಂದು ಚಿತ್ರದುರ್ಗ ವಿಭಾಗೀಯ ನಿಯಂತ್ರಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸ್ಕಿಲ್ ಇಂಡಿಯಾ ಕರ್ನಾಟಕ ಸ್ಪರ್ಧೆ: ನೋಂದಣಿಗೆ ಮನವಿ

» ಚಿತ್ರದುರ್ಗ

ವಿಶ್ವ ಕೌಶಲ್ಯ ಸ್ಪರ್ಧೆ-2024ರಲ್ಲಿ ಫ್ರಾನ್ಸ್ ದೇಶದ ಲಿಯೋನ್‌ನಲ್ಲಿ ನಡೆಯಲಿದೆ. ಇದಕ್ಕೆ ಪೂರ್ವ ತಯಾರಿಗಾಗಿ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮವು (ಕೆ.ಎಸ್.ಡಿ.ಸಿ) "ಸ್ಕಿಲ್ ಇಂಡಿಯಾ ಕರ್ನಾಟಕ 2024" ವನ್ನು ಪ್ರಾರಂಭಿಸಿದ್ದು, ಸ್ಪರ್ಧೆಯಲ್ಲಿ ಭಾಗವಹಿಸುವ ಆಸಕ್ತರು ನೋಂದಣಿ ಮಾಡಿಕೊಳ್ಳಲು ಕೋರಿದೆ.

ಪ್ರಾಥಮಿಕ ಹಂತ ಮತ್ತು ರಾಜ್ಯ ಮಟ್ಟದ ಸ್ಪರ್ಧೆಗಳಲ್ಲಿ ಗೆಲುವು ಸಾಧಿಸಿದವರಿಗೆ ನಿರಂತರ ತರಬೇತಿಯನ್ನು ಒದಗಿಸಿ ಪ್ರಾದೇಶಿಕ ಮತ್ತು ರಾಷ್ಟ್ರಮಟ್ಟದಲ್ಲಿ ಗೆಲುವು ಸಾಧಿಸಲು ಹಾಗೂ ಭಾರತವನ್ನು ಜಾಗತಿಕ ಮಟ್ಟದಲ್ಲಿ ಪ್ರತಿನಿಧಿಸಲು ವೇದಿಕೆಯನ್ನು ಕಲ್ಪಿಸಿಕೊಡುವುದು ಈ ಸ್ಪರ್ಧೆಯ ಪ್ರಮುಖ ಗುರಿಯಾಗಿದೆ. ಈ ಸ್ಪರ್ಧೆಯಲ್ಲಿ 57 ಕೌಶಲ್ಯಗಳ ಪಟ್ಟಿಯಿದ್ದು ಯಾವುದಾದರೊಂದನ್ನು ಆಯ್ಕೆ ಮಾಡಿಕೊಳ್ಳಬಹುದಾಗಿದೆ. ಆಸಕ್ತಿಯುಳ್ಳವರು www.skillindiadigital.gov.in ಈ ವೆಬ್‌ಸೈಟ್‌ನ ಮೂಲಕ ನೊಂದಣಿ ಮಾಡಿಕೊಳ್ಳಬಹುದಾಗಿದೆ. ಸ್ಪರ್ಧೆಯಲ್ಲಿ ಭಾಗವಹಿಸುವವರು 2002ರ ನವೆಂಬರ್ 1ರ ನಂತರ ಜನಿಸಿರಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಛೇರಿ ದೂರವಾಣಿ ಸಂಖ್ಯೆ 08194-234050 ಗೆ ಸಂಪರ್ಕಿಸಬಹುದು.

### ಪ್ರತಿಭಾ ವಿಕಾಸ ಸಂಘದ ಸಮಾರೋಪ ಸಮಾರಂಭ

» ದಾವಣಗೆರೆ

ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಜನವರಿ 2 ರಂದು ಬೆಳಿಗ್ಗೆ 10 ಗಂಟೆಗೆ ರಾಜನಹಳ್ಳಿ ಸೀತಮ್ಮ ಬಾಲಕಿಯರ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಪ್ರತಿಭಾ ವಿಕಾಸ ಸಂಘದ ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ದಾವಣಗೆರೆ ದಕ್ಷಿಣಾ ವಿಧಾನ ಸಭಾ ಕ್ಷೇತ್ರದ ಶಾಸಕರು ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರಾದ ಡಾ . ಶಾಮನೂರು ಶಿವಶಂಕರಪ್ಪ ಕಾರ್ಯಕ್ರಮ ಉದ್ಘಾಟಿಸುವರು. ರಾಜನಹಳ್ಳಿ ಸೀತಮ್ಮ ಬಾಲಕಿಯರ ಪದವಿ ಪೂರ್ವ ಕಾಲೇಜು ಪ್ರಾಚಾರ್ಯರಾದ ಟಿ.ಎ ಕುಸಗಟ್ಟಿ ಅಧ್ಯಕ್ಷತೆ ವಹಿಸುವರು. ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಕೆ.ಜಿ ಶಿವಕುಮಾರ್ ಪ್ರತಿಭಾ ಪುರಸ್ಕಾರ ನೆರವೇರಿಸುವರು. ಪಾಲಿಕೆ ಆಯುಕ್ತರಾದ ರೇಣುಕಾ ಬಹುಮಾನ ವಿತರಣೆ ಮಾಡುವರು. ಮುಖ್ಯ ಅತಿಥಿಗಳಾಗಿ ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ (ಪದವಿಪೂರ್ವ) ಕರಿಸಿದ್ದಪ್ಪ ಎಸ್.ಜಿ, ಪವರ್ ಲಿಫ್ಟಿಂಗ್ ಅಂತರಾಷ್ಟ್ರೀಯ ರೆಫರ್ ಲಕ್ಷ್ಮೀದೇವಿ, ಜೈನ್ ಇಂಜಿನಿಯರಿಂಗ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕಿ ಪವಿತ್ರ ಪಿ. ರಾಯ್ಕರ್, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಟಿ.ಧರ್ಮಪ್ಪ, ಮೆಹಬೂಬ್ ಸಾಬ್, ಎಂ ಎನ್ ಸಮೀವುಲ್ಲಾ, ಜ್ಯೋತಿ.ಟಿ, ಮಂಜುನಾಥ್ ಕೆ. ಪಿ ಹಾಗೂ ಹಿರಿಯ ಉಪನ್ಯಾಸಕ ಬಿ.ಪಾಲಾಕ್ಷಿ ಪಾಲ್ಗೊಳ್ಳುವರು.

# ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಹಿಡಿಯಲಿದ್ದಾರೆ ಮತದಾರರು: ಆಂಜನೇಯ

» ಚಿತ್ರದುರ್ಗ



2023ರಲ್ಲಿಮತದಾರರು ವಿಧಾನಸಭೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಕೈಹಿಡಿಯುವುದರ ಮೂಲಕ ಅಧಿಕಾರಕ್ಕೆ ತಂದಿದ್ದಾರೆ. ಇದೇ ರೀತಿ 2024ರಲ್ಲಿ ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿಯೂ ಸಹಾ ಮತದಾರರು ಕಾಂಗ್ರೆಸ್ ಪಕ್ಷವನ್ನು ಕೈಹಿಡಿಯುವುದರ ಮೂಲಕ ಕೇಂದ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕಿದೆ. ಈ ನಿಟ್ಟಿನಲ್ಲಿ ಪಕ್ಷದ ಮುಖಂಡರು ಕ್ಷೇತ್ರವಾರು ಪ್ರವಾಸವನ್ನು ಮಾಡುವುದರ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡುತ್ತಿದ್ದಾರೆ ಎಂದು ಮಾಜಿ ಸಚಿವ, ಕೆಪಿಸಿಸಿ ಉಪಾಧ್ಯಕ್ಷ ಎಚ್.ಆಂಜನೇಯ ತಿಳಿಸಿದರು.

ನಗರದಪತ್ರಿಕಾಭವನದಲ್ಲಿಸೋಮವಾರ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2023 ಕಾಂಗ್ರೆಸ್ಸಿಗೆ ಅಧಿಕಾರ ಕೊಟ್ಟ ವರ್ಷ. ಬಿಜೆಪಿ ಆಡಳಿತ ವೈಫಲ್ಯ, ಅಭದ್ರತೆ, ಭ್ರಷ್ಟಾಚಾರ, ಸ್ವಜನ ಪಕ್ಷಪಾತ ಆಡಳಿತದಿಂದ ಜನರು ಬೇಸತ್ತು ಕಾಂಗ್ರೆಸ್ಸಿಗೆ ಸ್ಪಷ್ಟ ಜನಾದೇಶ ನೀಡಿದ್ದರು. ಚುನಾವಣೆ ಭರವಸೆಯಂತೆ ಐದು ಗ್ಯಾರೆಂಟಿ ಜಾರಿ ಮಾಡುವ ಮೂಲಕ ಬಡವರ ಪರ ಇರುವ ಸರ್ಕಾರ ಎಂಬ ಹೆಗ್ಗಳಿಕೆಗೆ ಕಾರಣವಾಗಿದ್ದೇವೆ ಬಿಜೆಪಿಯವರು ಗ್ಯಾರೆಂಟಿಗಳಿಂದ ಕರ್ನಾಟಕ ಪಾಕಿಸ್ತಾನ ಆಗುತ್ತದೆ ಎನ್ನುವ ಆರೋಪ ಮಾಡಿದ್ದರು. ಆದರೆ, 14 ಬಜೆಟ್ ಮಂಡನೆ ಮಾಡಿರುವ ಸಿದ್ದರಾಮಯ್ಯ ಆರ್ಥಿಕ ತಜ್ಞ, ಅವರು ಎಲ್ಲವನ್ನೂ ಯಶಸ್ವಿಯಾಗಿ ನಿಭಾಯಿಸಿದ್ದಾರೆ ಎಂದು ತಿಳಿಸಿದರು.

ಬಿಜೆಪಿ 2014 ರಲ್ಲಿ ಕಾಂಗ್ರೆಸ್ ಮೇಲೆ ಇಲ್ಲಸಲ್ಲದ ಆಪಾದನೆ ಮಾಡಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದು ಹತ್ತು ವರ್ಷ ಕಳೆಯಿತು. ಈವರೆಗೆ ಯಾವುದೇ ಬೆಲೆ ನಿಯಂತ್ರಣ ಮಾಡಲಿಲ್ಲ. ಈ ಹಿನ್ನೆಲೆಯಲ್ಲಿ ಬಡವರ ಕಷ್ಟ ಅರಿತು, ಎಲ್ಲರ ಮನೆಗಳಿಗೆ ಉಚಿತ ವಿದ್ಯುತ್, ಅಕ್ಕಿ, ನಿರುದ್ಯೋಗಿಗಳಿಗೆ ಯುವನಿಧಿ, ಗೃಹಲಕ್ಷ್ಮೀ ಯೋಜನೆ ಕೊಟ್ಟಿದ್ದೇವೆ. ದೇಶದಲ್ಲಿ ಸಿದ್ದರಾಮಯ್ಯ ನಂ.1 ಮುಖ್ಯಮಂತ್ರಿಗಳಾಗಿದ್ದಾರೆ. 14 ಭಾರಿ ಆಯವ್ಯವನ್ನು ಮಂಡಿಸುವುದರ ಮೂಲಕ ಉತ್ತಮ ಅರ್ಥಿಕತಜ್ಞರಾಗಿದ್ದಾರೆ. 2014ರಲ್ಲಿ ಬಿಜೆಪಿ ಸುಳ್ಳುಗಳನ್ನು ಹೇಳುವುದರ ಮೂಲಕ ಅಧಿಕಾರವನ್ನು ಪಡೆದು ಬೆಲೆ ಏರಿಕೆಯನ್ನು ನಿಯಂತ್ರಿಸಲಾಗದೆ ಜನತೆಗೆ ಕಷ್ಟಗಳನ್ನು ನೀಡಿತು ಎಂದರು.

ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಮಾತನಾಡಿ, ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮುಖ್ಯವಲ್ಲ. ಪಕ್ಷದ ಗೆಲುವು ಮಾತ್ರ ಮುಖ್ಯ. ಈ ಉದ್ದೇಶದಿಂದ ಪಕ್ಷವನ್ನು ಪುನಃ ತಳಮಟ್ಟದಿಂದ ಸಂಘಟಿಸುವ ಕಾರ್ಯ ನಡೆಯುತ್ತಿದೆ. ಲೋಕಸಭಾ ಕ್ಷೇತ್ರ ವ್ಯಾಪ್ತಿಯ 8 ವಿಧಾನಸಭಾ ಕ್ಷೇತ್ರಗಳಲ್ಲಿ 7ರಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದೆ. ಜತೆಗೆ ಪಕ್ಷದ ಹೈಕಮಾಂಡ್ ಜಿಲ್ಲೆಯ ಮೂವರಿಗೆ ಪದಾಧಿಕಾರಿಗಳ ಹುದ್ದೆ ನೀಡಿದೆ. ಮುಂಬರುವ ಚುನಾವಣೆಯಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲುವು ಸಾಧಿಸಬೇಕು ಎಂದರು.

ವಿಧಾನಸಭೆ ಚುನಾವಣೆಯಲ್ಲಿ ಕರ್ನಾಟಕದಲ್ಲಿ 136 ಸ್ಥಾನ ಬಂದ ಹಿನ್ನೆಲೆಯಲ್ಲಿ ಅದರ ಪ್ರಭಾವ ತೆಲಂಗಾಣದಲ್ಲಿ ಪಕ್ಷ ಅಧಿಕಾರಕ್ಕೆ ಬಂದಿದೆ. ಲೋಕಸಭಾ ಚುನಾವಣೆ ವೇಳೆಯಲ್ಲಿ ರಾಜ್ಯದ ಜನರ ಮೇಲೆ ಜವಾಬ್ದಾರಿ ಇದೆ. ನಾಗಪುರ ಆರ್‌ಎಸ್‌ಎಸ್ ಕೇಂದ್ರ ಸ್ಥಾನವಾಗಿದ್ದರು ಸಹ ಅಲ್ಲಿ ನಡೆದ ಎಐಸಿಸಿ ಸಂಸ್ಥಾಪನಾ ದಿನಾಚರಣೆ ನಿರೀಕ್ಷೆ ಮೀರಿ ಯಶಸ್ಸು ಕಂಡಿತು. ಜನರಿಗೆ ಎಲ್ಲವೂ ಅರ್ಥವಾಗುತ್ತಿದೆ ಎಂದರು.

ಸಚಿವರಾದ ಮಹಾದೇವಪ್ಪ ಲೋಕಸಭೆ ಕ್ಷೇತ್ರದ ವೀಕ್ಷಕರಾಗಿ ಬಂದಿದ್ದಾಗ ಹೊರಗಿನವರು ಎಂದು ನನಗೆ ನಮ್ಮ ಪಕ್ಷದ ಯಾವ ಕಾರ್ಯಕರ್ತರು ವಿರೋಧ ಮಾಡಿಲ್ಲ ಅಲ್ಲಿ ಗಲಾಟೆ ಮಾಡಿದವರಲ್ಲಿ ನಮ್ಮ ಕಾರ್ಯಕರ್ತರು ಇರಲಿಲ್ಲ. ಲೋಕಸಭೆ ಚುನಾವಣೆಗೆ ಬಹಳಷ್ಟು ಜನ ಆಕಾಂಕ್ಷಿಗಳಿದ್ದೇವೆ. ಇಲ್ಲಿ ಯಾರು ಅಭ್ಯರ್ಥಿ ಎನ್ನುವುದಕ್ಕಿಂತ ಪಕ್ಷ ಗೆಲ್ಲಬೇಕು. ಕಾಂಗ್ರೆಸ್ ಕೇಂದ್ರದಲ್ಲೂ ಅಧಿಕಾರಕ್ಕೆ ಬರಬೇಕು ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿಗಳಾದ ಡಿ.ಎನ್. ಮೈಲಾರಪ್ಪ, ಸಂಪತ್ ಕುಮಾರ್, ಲಕ್ಷ್ಮೀಕಾಂತ್, ಪ್ರಕಾಶ್ ರಾಮನಾಯ್ಕ್, ಎನ್.ಡಿ.ಕುಮಾರ್ ಮತ್ತಿತರರಿದ್ದರು.

# ಅಮರ ಶಿಲ್ಪಿ ಜಕಣಾಚಾರಿಯವರ ಶಿಲ್ಪಕಲೆಗೆ ನೀಡಿದ ಕೊಡುಗೆ ಸರ್ವ ಕಾಲಕ್ಕೂ ಶಾಶ್ವತ

» ದಾವಣಗೆರೆ



ಅಮರಶಿಲ್ಪಿ ಜಕಣಾಚಾರಿ ಅವರು ಶಿಲ್ಪ ಕಲೆಗೆ ಅಪಾರ ಕೊಡುಗೆ ನೀಡಿದ್ದು, ಇವರ ಹೆಸರು ಸರ್ವಕಾಲಕ್ಕೂ ಅಮರವಾಗಿರುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ತುಂಗಾಭದ್ರ ಸಭಾಂಗಣದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಅಮರ ಶಿಲ್ಪಿ ಜಕಣಾಚಾರಿ ಅವರ ಸಂಸ್ಮರಣಾ ದಿನಾಚರಣೆಯಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಕನ್ನಡ ನಾಡಿನ ಇತಿಹಾಸದಲ್ಲಿ ಹೊಯ್ಸಳರು ತಮ್ಮದೇ ಆದ ಕೊಡುಗೆಯನ್ನು ಶಿಲ್ಪ ಕಲೆಗೆ ನೀಡಿದ್ದಾರೆ. ಇವರಲ್ಲಿ ವಿಷ್ಣುವರ್ಧನ ಅರಸನಕಾಲದಲ್ಲಿ ಶಿಲ್ಪಕಲೆಯು ಉತ್ತುಂಗ ಶಿಖರದಲ್ಲಿತ್ತು. ವಿಷ್ಣುವರ್ಧನನ ಹೆಂಡತಿ ಶಾಂತಲೆ ನಾಟ್ಯ ರಾಣಿ ಎಂದು ಪ್ರಸಿದ್ಧಿಯಾಗಿದ್ದಳು. ಈ ಕಾಲದಲ್ಲಿದ್ದ ಅಮರಶಿಲ್ಪಿ ಜಕಣಾಚಾರಿ ಬೇಲೂರು ಹಳೆಬೀಡಿನ ಚನ್ನಕೇಶವ ದೇವಾಲಯದಲ್ಲಿ ಶಿಲ್ಪಗಳನ್ನು ಕೆತ್ತನೆ ಮಾಡಿ ಹೆಸರಾಗಿದ್ದಾರೆ ಎಂದರು.

ಅಮರ ಶಿಲ್ಪಿ ಜಕಣಾಚಾರಿ ಅವರು ರೂಪಿಸಿದ ಅದ್ಭುತ ಕಲಾಕೃತಿಗಳು ಇಂದಿಗೂ ನಮ್ಮನ್ನು ಬೆರಗುಗೊಳಿಸಿತ್ತವೆ. ಇಂತಹ ಕಲೆ ಉಳಿಸಿ ಬೆಳೆಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು. ಜಗತ್ತಿನ ಅದ್ಭುತ ಶಿಲ್ಪಿಗಳ ಸಾಲಿನಲ್ಲಿ ನಿಲ್ಲುವ ಜಕಣಾಚಾರಿ ಅವರು ಬೇಲೂರು ಮತ್ತು ಹಳೆಬೀಡು ಸೇರಿದಂತೆ ಇತರ ಸ್ಥಳಗಳಲ್ಲಿ ಕಲ್ಲಿನಲ್ಲಿ ಕೆತ್ತಿದ ಕಲಾಕೃತಿಗಳನ್ನು ನೋಡುವುದೇ ಒಂದು ಸೌಭಾಗ್ಯ. ಮಾಡುವ ಕೆಲಸದಲ್ಲಿ ಜ್ಞಾನ, ಶ್ರದ್ಧೆ, ನಿಷ್ಠೆ ಮತ್ತು ಪ್ರಾಮಾಣಿಕತೆ ಇದ್ದಲ್ಲಿ ಯಶಸ್ಸು ಲಭಿಸುತ್ತದೆ. ನಮ್ಮೊಳಗಿನ ಕಲೆಯನ್ನು ನಾವು ಗುರುತಿಸಿದರೆ ಮಾತ್ರ ಸಮಾಜ ನಮ್ಮನ್ನು ಗುರುತಿಸುತ್ತದೆ. ಸಾಧಕರನ್ನು ಸ್ಮರಣೆ ಮಾಡಿದರಷ್ಟೇ ಸಾಲದು. ಅವರ ಗುಣ ಮತು ಬೆಳೆದು ಬಂದ ಪರಿಶ್ರಮದ ಘಟನೆಗಳನ್ನು ತಿಳಿದು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತೀ ಮುಖ್ಯ ಎಂದರು.

ಪ್ರೊ. ನಾಗರಾಜ್, ದಾವಣಗೆರೆ ಜಕಣಾಚಾರಿ ಜೀವನ ಚರಿತ್ರೆ ಮತ್ತು ಸಾಧನೆಗಳ ಕುರಿತು ಉಪನ್ಯಾಸ ನೀಡಿದರು.

ಮಹಾನಗರಪಾಲಿಕೆ ಉಪಮಹಾಪೌರರದ ಯಶೋಧ ಹೆಗ್ಗಪ್ಪ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ್, ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕರಾದ ರಾಜೇಂದ್ರ ಪ್ರಸಾದ್ ಹಾಗೂ ವಿಶ್ವಕರ್ಮ ಸಮಾಜದ ಮುಖಂಡರು ಉಪಸ್ಥಿತರಿದ್ದರು.

# ಸೋಲು, ಗೆಲುವು ಮುಖ್ಯವಲ್ಲ, ಸ್ಪರ್ಧೆ ಮಾಡುವುದು ಮುಖ್ಯ: ಶೈಲಜಾ



» ದಾವಣಗೆರೆ

ಕ್ರೀಡೆಯಿಂದ ಮಾನಸಿಕ, ದೈಹಿಕವಾಗಿ ಸಾಮರ್ಥ್ಯ ಹೆಚ್ಚಾಗುತ್ತದೆ, ಜೊತೆಯಲ್ಲಿ ಆರೋಗ್ಯ ಕೂಡ ಸಧೃಡವಾಗಿರುತ್ತದೆ ಎಂದು ದಕ್ಷಿಣ ಸಂಚಾರಿ ಪೊಲೀಸ್ ಠಾಣೆ ಪಿಎಸ್ ಐ ಶೈಲಜಾ ಕೆ. ಎಂ ತಿಳಿಸಿದರು. ನಗರದ ಸೋಮೇಶ್ವರ ವಿದ್ಯಾಲಯದಲ್ಲಿ ವಾರ್ಷಿಕ ಕ್ರೀಡಾಕೂಟದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿದ್ದ ವೇಳೆ ಈ ವಿಷಯ ತಿಳಿಸಿದರು.ಪಠ್ಯದ ಜೊತೆಕ್ರೀಡೆಯಲ್ಲೂ ವಿದ್ಯಾರ್ಥಿಗಳು ಭಾಗವಹಿಸಬೇಕು, ಸೋಲು ಗೆಲುವು ಸಾಮಾನ್ಯ ಆದರೆ ಸ್ಪರ್ಧೆ ಮಾಡುವುದು ಮುಖ್ಯ ಎಂದರು. ಉತ್ತಮ ಕ್ರೀಡಾಪಟು ಆಗುವುದರ ಜೊತೆ ನಿತ್ಯ ಜೀವನದಲ್ಲಿ ನಾವು ಸಾಮಾನ್ಯ ನಿಯಮಗಳನ್ನು ಪಾಲಿಸಬೇಕು, ಅದರಲ್ಲೂ ಸಂಚಾರಿ ನಿಯಮಗಳನ್ನು ವಿದ್ಯಾರ್ಥಿಗಳು ಪಾಲಿಸಬೇಕು, ರಸ್ತೆಯಲ್ಲಿ ಹೋಗುವಾಗ ವಿದ್ಯಾರ್ಥಿಗಳು ನಿಯಮ ಪಾಲಿಸಿದರೆ ಆಗುವ ಅನಾಹುತ ತಪ್ಪಿಸಬಹುದು, ಹೆಲ್ಮೆಟ್ ಬಳಸಬೇಕು, ಸಿಗ್ನಲ್ ಗಳನ್ನ ನೋಡಿ ಸಂಚರಿಸಬೇಕೆಂದರು. ಮಕ್ಕಳು ತಮ್ಮ ವಿದ್ಯಾರ್ಥಿ ಜೀವನದಲ್ಲಿಯೇ ಬದುಕಿನ ಪಾಠವನ್ನು ಕಲಿತುಬೇಕು, ಶ್ರೀ ಸೋಮೇಶ್ವರ ವಿದ್ಯಾಲಯ ಮಕ್ಕಳಿಗೆ ಎಲ್ಲಾ ರೀತಿಯ ವಿಚಾರಗಳನ್ನು ತಿಳಿಸಿಕೊಡುತ್ತಿದೆ ಎಂದು ಶ್ಲಾಘನೆ ವ್ಯಕ್ತಪಡಿಸಿದರು. ಬಳಿಕ ಶ್ರೀಸೋಮೇಶ್ವರ ವಿದ್ಯಾಲಯ ಗೌರವ ಕಾರ್ಯದರ್ಶಿಗಳು ಹಾಗೂ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದ ಕೆ.ಎಂ ಸುರೇಶ್ ಅವರು ಶಾಟ್ ಪುಟ್ ಕ್ರೀಡೆಗೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು ನಮ್ಮ ವಿದ್ಯಾಲಯದಲ್ಲಿ ಮಕ್ಕಳಿಗೆ ಕೇವಲ ಪಾಠ ಮಾತ್ರವಲ್ಲ ಪಠ್ಯ ಜೊತೆ ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಸಂಸ್ಕಾರ ಸಂಸ್ಕೃತಿ ಬಿತ್ತುವ ಎಲ್ಲಾ ಚಟುವಟಿಕೆಗಳನ್ನೂ ಮಾಡಲಾಗುತ್ತಿದೆ, ವಿದ್ಯಾರ್ಥಿಗಳ ಭವಿಷ್ಯ ಉಜ್ವಲಗೊಳಿಸಲು ನಮ್ಮ ಸಂಸ್ಥೆ ಎಲ್ಲಾ ರೀತಿ ಸಹಕಾರ, ಪ್ರೋತ್ಸಾಹ ನೀಡುತ್ತಿದೆ ಎಂದರು. ಈ ವೇಳೆ ಪೊಲೀಸ್ ಇಲಾಖೆಯ ಅರುಣ್ ಕುಮಾರ್, ಶ್ರೀ ಸೋಮೇಶ್ವರ ವಿದ್ಯಾಲಯದ ಪ್ರಾಂಶುಪಾಲರಾದ ಶ್ರೀಮತಿ ಪ್ರಭಾವತಿ, ಆಡಳಿತಾಧಿಕಾರಿ ಹರೀಶ್ ಬಾಬು, ಮುಖ್ಯೋಪಾಧ್ಯಾಯರು, ಕ್ರೀಡಾ ವಿಭಾಗದ ದೈಹಿಕ ಶಿಕ್ಷಕರು ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಅಲ್ಪಸಂಖ್ಯಾತರಿಗಾಗಿ ಮುರಾರ್ಜಿಶಾಲೆ ಮಂಜೂರು: ಸಚಿವ ಡಿ.ಸುಧಾಕರ್ ಹೇಳಿಕೆ

**ಹಿರಿಯೂರು:** ಹಿರಿಯೂರು ಕ್ಷೇತ್ರವನ್ನು "ಶಿಕ್ಷಣಕಾಶಿ" ಯನ್ನಾಗಿಸಲು ವಿಶೇಷ ಯೋಜನೆ ರೂಪಿಸಲಾಗಿದ್ದು, ಅಲ್ಪಸಂಖ್ಯಾತ ಸಮುದಾಯದ ಬಡಮಕ್ಕಳ ಉಜ್ವಲ ಭವಿಷ್ಯಕ್ಕೆ ನೆರವಾಗಲು ರಾಜ್ಯದ ಮುಖ್ಯಮಂತ್ರಿಗಳಾದ ಮಾನ್ಯ ಸಿದ್ದರಾಮಯ್ಯನವರು ನಮ್ಮ ತಾಲ್ಲೂಕಿಗೆ ಅಲ್ಪಸಂಖ್ಯಾತರ ಮುರಾರ್ಜಿಶಾಲೆ ಮಂಜೂರು ಮಾಡಿದ್ದಾರೆ. ಅಲೆಮಾರಿ ಸಮುದಾಯದವರಿಗೆ ಬಿಸಿಎಂ ವಸತಿ ಶಾಲೆ ಸ್ಥಾಪನೆಗೂ ಶೀಘ್ರದಲ್ಲೇ ಕ್ರಮಕೈಗೊಳ್ಳಲಾಗುವುದು ಎಂಬುದಾಗಿ ಸಚಿವರಾದ ಡಿ.ಸುಧಾಕರ್ ತಿಳಿಸಿದ್ದಾರೆ.ಮುರಾರ್ಜಿ ವಸತಿ ಶಾಲೆ ಸ್ಥಾಪಿಸಲಾಗಿದ್ದು, ಸಾವಿರಾರು ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕೆ ವರದಾನವಾಗಿದೆ.ಅಲ್ಪಸಂಖ್ಯಾತರ ಬಡ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕೆ ನೆರವಾಗಲು ಹೊಸದಾಗಿ ಶಾಲೆ ಮಂಜೂರು ಮಾಡಲಾಗಿದೆ. ಇದ್ದು, ಜಿಲ್ಲೆಯ ಹೊಳಲ್ಕೆರೆ ತಾಲೂಕಿನಲ್ಲಿ ಏಕೈಕ ಅಲೆಮಾರಿ ವಸತಿ ಶಾಲೆ ಸ್ಥಾಪನೆಯಾಗಿದೆ.

## ಪ್ರಮುಖ ಸುದ್ದಿ

# 2024ರ ಹೊಸವರ್ಷ ತಾಲ್ಲೂಕಿನ ಶೈಕ್ಷಣಿಕ ಪ್ರಗತಿ ಸಾಧನೆಗೆ ವರವಾಗಲಿ: ಬಿಇಒ ಕೆ.ಎಸ್.ಸುರೇಶ್

» ಚಳ್ಳಕೆರೆ



ತಾಲ್ಲೂಕಿನ ಶೈಕ್ಷಣಿಕ ಪ್ರಗತಿಯ ಬಗ್ಗೆ ಹೆಚ್ಚು ಚಿಂತನೆ ನಡೆಸಿದ್ದು, ಕಳೆದ 2023ರಲ್ಲೂ ಸಹ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಚಳ್ಳಕೆರೆ ತಾಲ್ಲೂಕು ತನ್ನದೇಯಾದ ದಾಖಲೆ ಮಾಡಿತ್ತು. 2024ರಲ್ಲಿ ಹೆಚ್ಚಿನ ಫಲಿತಾಂಶ ಪಡೆದು ರಾಜ್ಯಕ್ಕೆ ಮಾದರಿಕೇಂದ್ರವಾಗಲಿ ಎಂದು ಶುಭಹಾರೈಸುವುದಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು.

ಅವರು, ತಾಲ್ಲೂಕಿನ ಕೆಂಚವೀರನಹಳ್ಳಿ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಹೊಸವರ್ಷ ಆಚರಣೆ ಹಾಗೂ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಕಾರ್ಯಗಾರಕ್ಕೆ ಚಾಲನೆ ನೀಡಿ ಮಾತನಾಡಿದರು. ಅನೇಕ ಸಂದರ್ಭಗಳಲ್ಲಿ ಶಿಕ್ಷಕರು ವಿದ್ಯಾರ್ಥಿಗಳಿಗೆ ಹೆಚ್ಚು ನಿಗಾವಹಿಸಿ ಬೋಧನೆಮಾಡಿದರೂಸಹವಿದ್ಯಾರ್ಥಿಗಳು ನಿರ್ಲಕ್ಷ್ಯ ವಹಿಸಿದರೆ ಹೆಚ್ಚಿನ ಫಲಿತಾಂಶ ಬರಲು ಸಾಧ್ಯವಿಲ್ಲ. ಬೋಧನೆ ಮಾಡುವ ಶಿಕ್ಷಕರಷ್ಟೇ ಜವಾಬ್ದಾರಿ ಅದನ್ನು ಕೇಳುವ ವಿದ್ಯಾರ್ಥಿಗಳಿಗೆ ಇರಬೇಕು. ಎಲ್ಲರೂ ಸೇರಿ ಕೈಜೋಡಿಸಿದರೆ ಮಾತ್ರ ಶೈಕ್ಷಣಿಕ ಪ್ರಗತಿ ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್‌ಡಿಎಂಸಿ ಅಧ್ಯಕ್ಷ ಕೆ.ಟಿ.ಸಂಪತ್‌ಕುಮಾರ್, ಇಂದು ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಬೋಧನೆ ಮಾಡುವ ವ್ಯವಸ್ಥೆಯಲ್ಲಿ ಸುಧಾರಣೆ ಕಂಡಿದೆ. ವಿದ್ಯಾರ್ಥಿಗಳು ಸುಲಭವಾಗಿ ಅರ್ಥೈಸಿಕೊಳ್ಳಬಹುದಾದ ಹಲವಾರು ವಿಚಾರಗಳನ್ನು ಶಿಕ್ಷಕರು ತಿಳಿಸುತ್ತಾರೆ. ವಿಧಯೇತೆ, ವಿನಯದಿಂದ ವಿದ್ಯೆ ಕಲಿತರೆ ಮಾತ್ರ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಬಿ.ಜಿ.ನಾಗರಾಜು ಹಿರಿಯ ಶಿಕ್ಷಕ ಕೆಂಚವೀರನಹಳ್ಳಿ ಎನ್. ಮಲ್ಲೇಶ್, ಎಂ.ಪಿ.ರಾಜಶೇಖರ್, ಆರ್.ಬಸವರಾಜು, ಗ್ರಾಮ ಪಂಚಾಯಿತಿ ಸದಸ್ಯರಾದ ತಿಪ್ಪಮ್ಮ, ಮಹಂತೇಶ್, ದೇವರಾಜು, ಕೆ.ಓ.ಮಹಂತೇಶ್, ಆರ್.ಮನು, ಪ್ರಕಾಶ್, ಬಸವರಾಜು ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಮೆಕ್ಕೆಜೋಳ ಬೆಳೆಗೆ ಸೈನಿಕ ಹುಳದ ಬಾಧೆ ಪ್ರಕರಣ, ವಿಮಾ ಕಂಪನಿ ರೈತರಿಗೆ ಸೂಕ್ತ ಪರಿಹಾರ ನೀಡಲು ಸೂಚನೆ

» **ದಾವಣಗೆರೆ**

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗವು ಹರಿಹರ ತಾಲ್ಲೂಕು ಹೊಸಹಳ್ಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿನ ನಂದಿಗಾವಿ ಗ್ರಾಮದಲ್ಲಿ 2017-18ರಲ್ಲಿ ಮುಂಗಾರು ಹಂಗಾಮಿನಡಿಯಲ್ಲಿ ಮೆಕ್ಕೇಜೋಳ ಬೆಳೆದು ಸೈನಿಕ ಹುಳದ ಬಾಧೆಯಿಂದ ರೈತರು ಅನುಭವಿಸಿದ ನಷ್ಟಕ್ಕೆ ಅನುಗುಣವಾಗಿ ವಿಮಾ ಕಂಪನಿ ಪರಿಹಾರ ನೀಡಲು ಸೂಚಿಸಲಾಗಿದೆ. ರೈತರು ಬೆಳೆದ ಮೆಕ್ಕೆ ಜೋಳವು ಸೈನಿಕ ಹುಳದ ಬಾಧೆಯಿಂದ ನಷ್ಟಗೊಂಡಿದ್ದು, ಕೃಷಿ ಅಧಿಕಾರಿಗಳ ಸಲಹೆಯಂತೆ ಎಲ್ಲಾ ಅಗತ್ಯ ಕ್ರಮ ಕೈಗೊಂಡರೂ ಸಹಾ ಕೀಟರೋಗ ದಿನೇ ದಿನೇ ವ್ಯಾಪಿಸಿ ಬಹುತೇಕ ಬೆಳೆ ಹಾನಿಗೊಳಗಾಗಿತ್ತು. ರೈತರು ವಿಮಾ ಕಂಪನಿಯ ಪ್ರತಿನಿಧಿಗಳಿಗೆ ತಮ್ಮ ಅಹವಾಲನ್ನು ಸಲ್ಲಿಸಿದರೂ ಸಹ ನಿರ್ಲಕ್ಷಿಸಿದ್ದು, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಮಹಾಂತೇಶ ಶಿಗ್ಲಿ ಹಾಗೂ ಸದಸ್ಯರಾದ ಸಿ.ಎಸ್ ತ್ಯಾಗರಾಜನ್ ಮತ್ತು ಗೀತಾ ಅವರನ್ನೊಳಗೊಂಡ ಆಯೋಗವು ವಿಮಾ ಕಂಪನಿಯವರು ಬೆಳೆ ಹಾನಿಗೊಳಗಾದ ರೈತರಿಗೆ ಸೂಕ್ತ ಪರಿಹಾರ ನೀಡಲು ಆದೇಶಿಸಿದ್ದಾರೆ.

### ಜ.04ಕ್ಕೆ ಚೌಳೂರು ಶ್ರೀ ವೀರಭದ್ರಸ್ವಾಮಿಯ ರಥೋತ್ಸವ

» **ಪರಶುರಾಂಪುರ**

ಸಮೀಪದ ಚೌಳೂರು ಗ್ರಾಮದ ಆರಾಧ್ಯ ದೈವ ಶ್ರೀವೀರಭದ್ರಸ್ವಾಮಿ ದೇವರ ಕಡೇಕಾರ್ತಿಕೋತ್ಸವ ಅಂಗವಾಗಿ ರಥೋತ್ಸವ ಹಾಗೂ ತೆಪ್ಪೋತ್ಸವ ಸೇರಿದಂತೆ ಶ್ರೀ ಆಂಜನೇಯಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜೆಯೊಂದಿಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜ.04 ಗುರುವಾರ ದಿಂದ ಜ.6ಶನಿವಾರದ ವರಗೆ ಮೂರು ದಿನಗಳ ಕಾಲ ನಡೆಯುವ ಜಾತ್ರೆಯ ಅಂಗವಾಗಿ ರಥೋತ್ಸವ ಹಾಗೂ ವೇದಾವತಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಬ್ಯಾರೇಜ್ ಬಳಿಯಲ್ಲಿ ತೆಪ್ಪೋತ್ಸವ ನಡೆಸಲು ಸಿದ್ದತೆಗಳು ನಡೆಯುತ್ತಿವೆ .ಉತ್ಸವದಲ್ಲಿ ಕೀಲು ಕುದುರೆ,ಲಂಬಾಣಿನೃತ್ಯ,ಡೊಳ್ಳುಕುಣಿತ,ಚಕ್ಕೆಭಜನೆ ಸೇರಿದಂತೆ ವಿವಿಧ ಜಾನಪದ ಕಲಾತಂಡ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ನಡೆಯಿಲಿವೆ. ಜಾತ್ರೆಯ ಪ್ರಯುಕ್ತ ಗ್ರಾಮದ ದೇವಾಲಯ ಸೇರಿದಂತೆ ವಿವಿಧ ಬೀದಿಗಳಿಗೆ ವಿದ್ಯುತ್ ದೀಪ ಅಲಂಕಾರದ ಮೂಲಕ ಸಜ್ಜುಗೊಂಡಿವೆ.ಜ.04 ಗುರುವಾರ ರಂದು ಸ್ವಾಮೀಗೆ ಬೆಳಿಗ್ಗೆ ವೇದಾವತಿನದಿಯಲ್ಲಿ ಗಂಗಾಪೂಜೆ ನಂತರ ರಾತ್ರಿ ದೇಗುಳದ ಬಳಿಯಲ್ಲಿ ಕಾರ್ತಿಕೋತ್ಸವ ನಡೆಸಲಾಗುತ್ತದೆ. ಬಳಿಕ ರಥೋತ್ಸವಕ್ಕೆ ಚಾಲನೆ ದೊರೆಯಲಿದೆ. ರಥೋತ್ಸವಕ್ಕೆ ಭಕ್ತಾದಿಗಳು ಹೂವಿನ ಹಾರ ಸಲ್ಲಿಸುವವರು ಬೆಳಗ್ಗೆ 9 ಗಂಟೆಯ ಒಳಗೆ ದೇವಸ್ಥಾನದ ಹತ್ತಿರ ಕೊಡಬೇಕು ಎಂದು ದೇವಸ್ಥಾನದ ಕಮಿಟಿಯವರು ತಿಳಿಸಿದ್ದಾರೆ .ಜ.05 ಶುಕ್ರವಾರದಂದು ಬೆಳಿಗ್ಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಶ್ರೀ ಆಂಜನೇಯಸ್ವಾಮಿ ಹಾಗೂ ವೀರಭದ್ರದೇವರ ಅಡ್ಡಪಲ್ಲಕ್ಕಿ ಉತ್ಸವ ನಡೆಸಲಾಗುತ್ತದೆ. ಸಂಜೆ 3 ಗಂಟೆ ಸುಮಾರಿಗೆ ವೇದಾವತಿ ಬ್ಯಾರೇಜ್‌ನಲ್ಲಿ ತೆಪ್ಪೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.ಜ.06 ಭಾನುವಾರ ರಂದು ಮಹಾಮಂಗಳಾರತಿ ಹಾಗೂ ಪ್ರಸಾದ ವಿನಿಯೋಗ ಕಾರ್ಯಕ್ರಮ ಜರುಗುವುದು.



### ನಾರಾಯಣಗೌಡರ ಬಿಡುಗಡೆಗೆ ಒತ್ತಾಯಿಸಿ ಪಂಜಿನ ಮೆರವಣಿಗೆ



» **ಹಿರಿಯೂರು**

ಕರ್ನಾಟಕ ರಕ್ಷಣಾ ವೇದಿಕೆ ತಾಲ್ಲೂಕು ಘಟಕದ ವತಿಯಿಂದ ಭಾನುವಾರ ಶ್ರೀಯುತ ಕರವೇ ರಾಜ್ಯಾಧ್ಯಕ್ಷರಾದ ಟಿ.ಎ.ನಾರಾಯಣಗೌಡರ ಬಂಧನದಿಂದ ಬಿಡುಗಡೆಗೊಳಿಸುವಂತೆ ಒತ್ತಾಯಿಸಿ ತಾಲ್ಲೂಕು ಕರವೇ ಘಟಕದ ವತಿಯಿಂದ ಬೈಪಾಸ್ ರಂಜಿತಾ ಹೋಟೆಲ್ ಸರ್ಕಲ್ ನಿಂದ ತಾಲ್ಲೂಕು ಅಧ್ಯಕ್ಷರಾದ ರಾಮಕೃಷ್ಣಪ್ಪ ಮತ್ತು ನಗರಾಧ್ಯಕ್ಷರಾದ ಮೊಹಮ್ಮದ್ ಜಾಕೀರ್ ರವರ ನೇತೃತ್ವದಲ್ಲಿ ಪಂಜಿನ ಮೆರವಣಿಗೆಯ ಮೂಲಕ ಸರ್ಕಾರವನ್ನು ಒತ್ತಾಯಿಸಲಾಯಿತು.ಕನ್ನಡಪರ ಹೋರಾಟಗಾರರನ್ನ ಬಂಧಿಸಿರುವುದು ಸರಿಯಲ್ಲ ಕರವೇ ಹಿರಿಯೂರು ತಾಲೂಕು ಘಟಕದ ವತಿ ಯಿಂದಈಗಾಗಲೇನಗರಸಭೆಗೆನಾವುಮನವಿಯನ್ನ ನವಂಬರ್ 2 ರಂದು ಕೊಟ್ಟಿರುತ್ತೇವೆ.

---

### ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ಕುರಿತು ತರಬೇತಿ ಕಾರ್ಯಕ್ರಮ

# ಸಮಗ್ರ ಕೃಷಿ ಪದ್ಧತಿ ಅಳವಡಿಕೆಗೆ ಸಲಹೆ

» **ಚಿತ್ರದುರ್ಗ**

ಸಮಗ್ರ ಕೃಷಿ ಪದ್ಧತಿಯನ್ನು ರೈತರು ಅನುಸರಿಸುವುದರಿಂದ ಆರ್ಥಿಕವಾಗಿ ಸಬಲರಾಗಿ ಸ್ವಾವಲಂಬನೆಯ ಜೀವನ ನಡೆಸಲು ಸಹಕಾರಿಯಾಗಲಿದೆ ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕ ಆರ್.ರಜನೀಕಾಂತ ಹೇಳಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನ ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಈಚೆಗೆ ಜಿಲ್ಲೆಯ ರೈತರಿಗೆ "ವೈಜ್ಞಾನಿಕ ಕುರಿ ಮತ್ತು ಮೇಕೆ ಸಾಕಾಣಿಕೆ "ಕುರಿತು ಒಂದು ದಿನದತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ರೈತರು ಪ್ರಸ್ತುತ ಹವಾಮಾನ ವೈಪಾರಿತ್ಯದಿಂದ ಕೃಷಿಯನ್ನು ಒಂದೇ ನಂಬಿ ಆರ್ಥಿಕವಾಗಿ ಮುನ್ನೆಡೆಯಲು ಸಾಧ್ಯವಾಗದ ಹಿನ್ನಲೆಯಲ್ಲಿ ಕೃಷಿಗೆ ಪೂರಕವಾದ ತೋಟಗಾರಿಕೆ ಬೆಳೆಗಳು, ಜೇನು ಸಾಕಾಣಿಕೆ ಹೈನುಗಾರಿಕೆ, ಕೋಳಿ ಸಾಕಾಣಿಕೆ ಹಾಗೂ ಕುರಿ ಮತ್ತು ಮೇಕೆ ಸಾಕಾಣಿಕೆಯನ್ನು ಕೈಗೊಳ್ಳುವುದರಿಂದ ಒಂದರಲ್ಲಿ ನಷ್ಟವಾದರೆ ಇನ್ನೊಂದು ಕೃಷಿ ಪೂರಕ ಚಟುವಟಿಕೆಯಿಂದ ಲಾಭವನ್ನು ನಿರೀಕ್ಷಿಸಬಹುದು ಎಂದರು.

ಸಮಗ್ರ ಕೃಷಿ ಪದ್ದತಿಯ ಒಂದು ಅಂಗವಾದ ಕುರಿ ಮತ್ತು ಮೇಕೆ ಸಾಕಾಣಿಕೆಯ ಕುರಿತು ವೈಜ್ಞಾನಿಕವಾಗಿ ಉತ್ತಮ ಕುರಿ ಮತ್ತು ಮೇಕೆ ತಳಿಯ ಆಯ್ಕೆ, ಕುರಿ ಶೆಡ್ ಮತ್ತು ಮೇವಿನ ನಿರ್ವಹಣೆ ಹಾಗೂ ಅವುಗಳ ಆರೋಗ್ಯ ನಿರ್ವಹಣೆ ಬಗ್ಗೆ ರೈತರು ಈ ತರಬೇತಿಯಲ್ಲಿ ನಿಡಲಾಗುವ ಮಾಹಿತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೋರಿದರು.ಪಶುಸಂಗೋಪನಾ ಇಲಾಖೆ ನಿವೃತ್ತ ಸಹಾಯಕ ನಿರ್ದೇಶಕ ಡಾ.ದೊಡ್ಡಮಲ್ಲಯ್ಯ ಮಾತನಾಡಿ, ಭಾರತದಲ್ಲಿ ಮಾಂಸಹಾರ ಸೇವನೆಗೆ ಅತೀ ಹೆಚ್ಚು ಕುರಿ ಮತ್ತು ಮೇಕೆ ಮಾಂಸ ಉಪಯೋಗದಲ್ಲಿದ್ದು, ಕುರಿ ಮತ್ತು ಮೇಕೆಯಿಂದ ಹಾಲು, ಉಣ್ಣೆ, ಚರ್ಮ ಮತ್ತು ಮಣ್ಣಿನ ಫಲವತ್ತತೆ ಹೆಚ್ಚಿಸಲು ಉತ್ತಮ ಗೊಬ್ಬರ ದೊರೆಯುತ್ತದೆ ಎಂದು ತಿಳಿಸಿದ ಅವರು, ಕುರಿ ಮತ್ತು ಮೇಕೆ ಸಾಕಣಿಕೆಯಲ್ಲಿ ರೈತರಲ್ಲಿ ಆಸಕ್ತಿ ಮೂಡಿಸಲು ಬಿ.ಜಿಕೆರೆ ವೀರಭದ್ರಪ್ಪ, ಶಿರಾ ತಾಲ್ಲೂಕಿನ ದಿ. ದೊಡ್ಡಜ್ಜಿ, ಸುಬ್ಬಾರೆಡ್ಡಿ, ವೀರಕೆಂಪಣ್ಣರ ಯಶೋಗಾಥೆಯನ್ನು ಸವಿವರವಾಗಿ ತಿಳಿಸಿದರು. ಚಿತ್ರದುರ್ಗ ಜಿಲ್ಲೆಯು ಸಾಂಪ್ರದಾಯಿಕವಾಗಿ ಕುರಿ ಮತ್ತು ಮೇಕೆ ಸಾಕಾಣಿಕೆಗೆ ಪ್ರಸಿದ್ಧಿಯಾಗಿದ್ದು, ಸಾಕಾಣಿಕೆಯ ವೈಜ್ಞಾನಿಕ ಜ್ಞಾನ, ಬದ್ದತೆ ಹಾಗೂ ಶಿಸ್ತು ರೂಢಿಸಿಕೊಂಡರೆ ಉತ್ತಮ ಲಾಭವನ್ನು ನಿರೀಕ್ಷಿಸಲು ಸಾಧ್ಯ. ಜಿಲ್ಲೆಯಲ್ಲಿ ಕುರಿ ಸಾಕಾಣಿಕೆಯ ರೈತರು ಒಟ್ಟುಗೂಡಿ ಕುರಿ ಫೆಡರೇಷನ್ ಮಾಡಿಕೊಳ್ಳುವುದರಿಂದ ಎಲ್ಲರೂ ಸಮಗ್ರವಾಗಿ ಮುನ್ನೆಡೆಯಲು ಅನುಕೂಲಕರವಾಗಿದೆ ಎಂದು ಸಲಹೆ ನೀಡಿದರು. ಕುರಿ ಮತು ಉಣ್ಣೆ ಅಭಿವೃದ್ಧಿ ನಿಗಮ ಸಹಾಯಕ ನಿರ್ದೇಶಕ ಡಾ.ಸಿ.ತಿಪ್ಪೇಸ್ವಾಮಿ ಮಾತನಾಡಿ, ರಾಜ್ಯದಲ್ಲಿಯೇ ಚಿತ್ರದುರ್ಗ ಜಿಲ್ಲೆಯಲ್ಲಿ ಅತಿ ಹೆಚ್ಚು ಕುರಿ (13.50 ಲಕ್ಷ) ಮತ್ತು ಮೇಕೆಗಳ (3.85 ಲಕ್ಷ) ಸಂಖ್ಯೆಯಿದ್ದು, ಕುರಿ ಮತ್ತು ಮೇಕೆ ಮಾಂಸಕ್ಕೆ ಅತೀ ಹೆಚ್ಚು ಬೇಡಿಕೆ ಹಾಗೂ ಅವುಗಳ ಸಾಕಾಣಿಕೆ ಉತ್ತಮ ಅವಕಾಶಗಳಿವೆ. ಇವು ಸದಾ ಕಾಲ ಸಣ್ಣ ಮತ್ತು ಅತೀ ಸಣ್ಣ ರೈತರು ಹಾಗೂ ಕೃಷಿ ಕಾರ್ಮಿಕರಿಗೆ ಕಡಿಮೆ ವೆಚ್ಚದಲ್ಲಿ ಹೆಚ್ಚಿನ ಲಾಭ ತಂದುಕೊಡುವಂತಾಗಿವೆ. ಕುರಿಗಳಲ್ಲಿ ಡೆಕನಿ, ಬನ್ನೂರು ಮತ್ತು ಬಳ್ಳಾರಿ ತಳಿಗಳು ಉತ್ತಮವಾಗಿದ್ದು ಮೇಕೆಯಲ್ಲಿ ನಂದಿದುರ್ಗ ತಳಿಯು ಹೆಸರುವಾಸಿಯಾಗಿದೆ. 25-30 ಕುರಿಗಳಿಗೆ ಒಂದು ಟಗರನ್ನು ಸಾಕುವುದರಿಂದ ಗಣನೀಯವಾಗಿ ಅವುಗಳ ವಂಶಾಭಿವೃದ್ಧಿ ಹೆಚ್ಚಿಸಬಹುದು ಎಂದರು.

ಕುರಿ ಮತ್ತು ಮೇಕೆ ಸಾಕಾಣಿಕೆ ಪದ್ದತಿ ಮತ್ತು ಆರೋಗ್ಯ ನಿರ್ವಹಣೆಯ ಕುರಿತು ಹಾಜರಿದ್ದ ರೈತರ ಪ್ರಶ್ನೆಗಳಿಗೆ ಚರ್ಚಿಸುವುದರ ಮೂಲಕ ಮಾಹಿತಿ ನೀಡಿದರು. ವಿವಿಧ ಗ್ರಾಮಗಳಿಂದ ಬಂದಿದ್ದ ರೈತರು ಸಹ ಕುರಿ ಮತ್ತು ಮೇಕೆ ಸಾಕಾಣಿಕೆಯಲ್ಲಿ ತಮ್ಮ ಅನುಭವಗಳನ್ನು ಹಂಚಿಕೊಂಡರು.

ಕೃಷಿ ಅಧಿಕಾರಿ ಎಂ.ಜೆ.ಪವಿತ್ರಾ ಮಾತನಾಡಿ, ರೈತರಿಗೆ ಫ್ರೂಟ್ಸ್ ತಂತ್ರಾಂಶದಲ್ಲಿ ಪಹಣಿ ಮತ್ತು ಆಧಾರ್‌ನೊಂದಿಗೆ ನೋಂದಾಯಿಸುವುದರಿಂದ ಕೃಷಿ ಇಲಾಖೆ ಮತ್ತು ಕೃಷಿ ಸಂಬಂಧಿತ ಇಲಾಖೆಗಳ ಸರ್ಕಾರದ ಹಲವು ಯೋಜನೆಗಳಲ್ಲಿ ಡಿ.ಬಿ.ಟಿ ಮೂಲಕ ಸಹಾಯಧನ ಪಡೆಯಲು ಸಹಕಾರಿಯಾಗಿದೆ. ಪಿ.ಎಂ. ಕಿಸಾನ್‌ಯೋಜನೆಯಡಿ ಸೌಲಭ್ಯವನ್ನು ಮುಂದುವರೆಸಲು ಇ.ಕೆ.ವೈ.ಸಿ ಮಾಡಿಸುವುದು ಕಡ್ಡಾಯವಾಗಿದ್ದು, ರೈತರು ಫ್ರೂಟ್ಸ್‌ತಂತ್ರಾಂಶದ ನೋಂದಣಿ, ಆಧಾರ್‌ಜೋಡಣೆ ಮತ್ತು ಇ.ಕೆ.ವೈ.ಸಿ ಕರಿತು ಹೆಚ್ಚಿನ ಮಾಹಿತಿಗಾಗಿ ಸಮೀಪದ ರೈತ ಸಂಪರ್ಕ ಕೇಂದ್ರವನ್ನು ಸಂಪರ್ಕಿಸಲು ಕೋರಿದರು.

ಕೃಷಿ ಅಧಿಕಾರಿಯಾದ ಪವಿತ್ರಾ ಎಂ. ಜೆ. ಮತ್ತು ಟ.ಪಿ ರಂಜಿತಾ ತರಬೇತಿಗೆ ರೈತರ ನೋಂದಾವಣಿ ಮಾಡಿದರು. ಜಿಲ್ಲಾ ಕೃಷಿ ತರಬೇತಿಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು (ರೈತ ಮಹಿಳೆ) ಎಂ. ಉಷಾರಾಣಿ ವಂದನಾರ್ಪಣೆ ಮಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕೃಷಿ ತರಬೇತಿಕೇಂದ್ರ ಸಿಬ್ಬಂದಿ ವರ್ಗದವರು ಹಾಗೂ ಜಿಲ್ಲೆಯ ವಿವಿಧ ಭಾಗದಿಂದ ಆಗಮಿಸಿದ ರೈತರು ಹಾಜರಿದ್ದರು.

---

# ಮಕ್ಕಳಲ್ಲಿ ವೈಜ್ಞಾನಿಕ ಭಾವನೆ ಮೂಡಿಸಿ

» **ದಾವಣಗೆರೆ**

ವಿಜ್ಞಾನ ಬಹಳ ಆಲೋಚನೆ ಮಾಡುವಂತಹ ವಿಷಯವಾಗಿದೆ. ಪ್ರತಿಯೊಂದು ಆಚರಣೆ ಹಿಂದೆ ಒಂದೊಂದು ವಿಚಾರ ಇರುತ್ತದೆ. ಅದರಲ್ಲಿ ನಂಬಿಕೆ, ಅಪನಂಬಿಕೆ, ಮೂಢನಂಬಿಕೆಗಳು ಇವೆ. ತತ್ವಬದ್ಧ ಆಚರಣೆಗಳನ್ನು ಹೋಗಲಾಡಿಸಿ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಮೂಡಿಸುವಂತಹ ಕೆಲಸವನ್ನು ವಿಜ್ಞಾನದ ಬೋಧನೆಯಲ್ಲಿ ನಾವು ಮಾಡಬೇಕಿದೆ ಎಂದು ದಾವಣಗೆರೆ ಉತ್ತರ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಆರ್.ಶೇರ್ ಅಲಿ ಹೇಳಿದರು.

ಇಲ್ಲಿನ ಕೊಂಡಜ್ಜಿ ರಸ್ತೆಯಲ್ಲಿರುವ ಬಿಜೆಎಂ ಮತ್ತು ಜಿಎಂಬಿ ಶಾಲೆಯಲ್ಲಿ ಸೋಮವಾರ ಬಿಜೆಎಂ ಬ್ಲೋಸಮ್ ಸೈನ್ಸ್ ಫೇರ್ ಕಲಾ-ವಿಜ್ಞಾನ ವಸ್ತುಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಈ ಕಲಾ-ವಿಜ್ಞಾನ ವಸ್ತುಪ್ರದರ್ಶನದಲ್ಲಿ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಬೇಕಾಗಿರುವಂತಹ ಎಲ್ಲಾ ರೀತಿಯ ವಿಷಯಗಳ ಕುರಿತು ಮಕ್ಕಳು ತಮ್ಮ ಪ್ರತಿಭೆ ಪ್ರದರ್ಶಿಸುತ್ತಿದ್ದಾರೆ. ವೈಜ್ಞಾನಿಕ ಬೋಧನೆಗಳಂತಹ ವಿಚಾರಗಳನ್ನು ಅರ್ಥ ಮಾಡಿಕೊಂಡಾಗ ನಾವು ಜ್ಞಾನವಂತರಾಗಲು ಸಾಧ್ಯವಾಗುತ್ತದೆ. ಮನುಷ್ಯ ಚೆನ್ನಾಗಿದ್ದರೆ ಇಡೀ ಪ್ರಪಂಚವೇ ಚೆನ್ನಾಗಿರಲು ಸಾಧ್ಯ. ಈ ಶಾಲೆ ಶೈಕ್ಷಣಿಕವಾಗಿ ಇನ್ನಷ್ಟು ಪ್ರಗತಿ ಆಗಲಿ, ಬರೀ ಓದಿ ಪಾಸ್ ಆಗುವುದು ಮುಖ್ಯವಲ್ಲ. ಎಲ್ಲರೂ ಕೂಡಾ ಡಿಸ್ಟಿಂಕ್ಷನ್‌ನಲ್ಲಿ ಪಾಸ್ ಆಗಿ ಶಾಲೆಗೆ, ಪೋಷಕರಿಗೆ ಕೀರ್ತಿ ತರಬೇಕು ಎಂದರು.

ಸಂಪನ್ಮೂಲ ವ್ಯಕ್ತಿಯಾದ ಕರ್ನಾಟಕ ವಿಜ್ಞಾನ ಪರಿಷತ್‌ನ ಕಾರ್ಯದರ್ಶಿ ಎಂ.ಗುರುಸಿದ್ದಸ್ವಾಮಿ ಮಾತನಾಡಿ, ಈ ಸಮಾಜ ವಿಜ್ಞಾನ ವಸ್ತುಪ್ರದರ್ಶನ ಇಡೀ ವರ್ಷದ ಶಾಲೆಯ ತಮ್ಮ ಮಕ್ಕಳ ಶಿಕ್ಷಕರ ಬದ್ಧತೆಯನ್ನು ತೋರಿಸುತ್ತದೆ. ಇಡೀ ವರ್ಷದಲ್ಲಿ ಶಿಕ್ಷಕರು ಮಕ್ಕಳಿಗೆ ಏನನ್ನು ಕಲಿಸಿದ್ದಾರೋ, ಮಕ್ಕಳು ಏನು ಕಲಿತಿದ್ದಾರೋ ಎಂಬುದನ್ನು ಪ್ರಾತ್ಯಕ್ಷಿಕೆ ಮೂಲಕ ಅಭಿವ್ಯಕ್ತಪಡಿಸುವ ಈ ವಸ್ತುಪ್ರದರ್ಶನದ ಉದ್ದೇಶವಾಗಿದೆ. ಈ ವಸ್ತುಪ್ರದರ್ಶನದಲ್ಲಿ ಮಕ್ಕಳು ಹೆಚ್ಚು ಆಸಕ್ತಿಯಿಂದ, ಕುತೂಹಲದಿಂದ ಪರಿಣಾಮಕಾರಿಯಾಗಿ ಪಾಲ್ಗೊಳ್ಳುತ್ತಾರೆ. ಆ ಮೂಲಕ ಕನಿಷ್ಠ ಮಟ್ಟದಿಂದ ಗರಿಷ್ಠ ಮಟ್ಟಕ್ಕೆ ಏರಲು ಸಹಕಾರಿಯಾಗಲಿದೆ. ಈ ಪ್ರದರ್ಶನದಲ್ಲಿ ಮಕ್ಕಳು, ಶಿಕ್ಷಕರು ಮತ್ತು ಪೋಷಕರು ಭಾಗಿಯಾಗುತ್ತಾರೆ. ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಹಂಚಿಕೊಳ್ಳಲು ಈ ವಸ್ತು ಪ್ರದರ್ಶನ ಸಹಕಾರಿಯಾಗಿ ಉತ್ತಮ ವೇದಿಕೆಯಾಗಲಿದೆ. ಈ ಬಿಜೆಎಂ ಶಾಲೆ ಮಕ್ಕಳು ಬರೀ ಓದಿನ ಕಡೆಗೆ ಅಷ್ಟೇ ಅಲ್ಲದೇ ಸಾಂಸ್ಕೃತಿಕವಾಗಿಯೂ ಕೂಡಾ ಪ್ರಭಾವಿತವಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಶಾಲೆ ಕಾರ್ಯದರ್ಶಿ ಮಂಜುನಾಥ ಅಗಡಿ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಈ ವಸ್ತುಪ್ರದರ್ಶನ ಕೇವಲ ವಿಜ್ಞಾನಕ್ಕೆ, ಒಂದು ವಸ್ತುವಿಗೆ ಸಂಬಂಧಿಸಿದ ವಸ್ತುಪ್ರದರ್ಶನವಲ್ಲ, ಎಲ್ಲಾ ರೀತಿಯ ವಿಷಯಗಳ ಮಿಲನವಾಗಿದೆ. ಕನ್ನಡ, ಇಂಗ್ಲೀಷ್, ಗಣಿತ, ವಿಜ್ಞಾನ, ಸಮಾಜ, ಹಿಂದಿ ವಿಷಯಕ್ಕೆ ಸಂಬಂಧಿಸಿದ ವಿಜ್ಞಾನ ಪ್ರದರ್ಶನವಾಗಿದೆ. ಕೊರೋನಾದಿಂದ ಬಹಳಷ್ಟು ಜನರು ಸಾವು ನೋವನ್ನು ಅನುಭವಿಸಿದರು. ಅದನ್ನು ತಡೆಯಲು ಔಷಧಿಯನ್ನು ಕಂಡು ಹಿಡಿದರು. ಇದಕ್ಕೆಲ್ಲಾ ಕಾರಣ ವಿಜ್ಞಾನ. ಆರೂ ವಿಷಯಗಳು ಇರುವುದು ನಮ್ಮ ಜೀವನದ ವ್ಯಕ್ತಿತ್ವ ವಿಕಾಸನಗೊಳಿಸಿಕೊಳ್ಳಲು. ಈ ಉದ್ದೇಶದಿಂದ ಮಕ್ಕಳಿಗೆ ಈ ವಸ್ತುಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ಇಲ್ಲಿ ಪ್ರತಿಯೊಬ್ಬ ಮಕ್ಕಳೂ ಕೂಡಾ ತಮ್ಮ ಪ್ರತಿಭೆಯನ್ನು ಈ ವಸ್ತುಪ್ರದರ್ಶನದ ಮೂಲಕ ಪ್ರದರ್ಶಿಸಿ, ಅವುಗಳ ಬಗ್ಗೆ ವಿವರಿಸುವ ಮೂಲಕ ಒಂದು ರೀತಿಯ ಹಬ್ಬದ ವಾತಾವರಣವನ್ನು ಸೃಷ್ಟಿಸಿದ್ದಾರೆ. ಶಿಕ್ಷಣ ಎಂದರೆ ಅದು ಬರೀ ಪುಸ್ತಕದ ಬದನೆಕಾಯಿಯಾಗಬಾರದು. ಮಕ್ಕಳ ಮುಂದಿನ ಸಾಧನೆಗೆ ಇಂದಿನ ಶೈಕ್ಷಣಿಕ ಚಟುವಟಿಕೆಗಳು, ಈ ವಸ್ತುಪ್ರದರ್ಶನ ಮಾದರಿಯಾಗಲಿದೆ ಎಂದರು.

ಈ ಕಾರ್ಯಕ್ರಮದಲ್ಲಿ ವಿಘ್ನೇಶ್ವರ ಶಾಲೆ ಕಾರ್ಯದರ್ಶಿ ಡಿ.ಎಸ್.ಪಂಚಾಕ್ಷರಿ, ಸಿಆರ್‌ಪಿ ಸೈಫುಲ್ಲಾ ಇತರರು ಇದ್ದರು.

ವಿಜ್ಞಾನ ವಸ್ತುಪ್ರದರ್ಶನ ಕುರಿತು ಶಿಕ್ಷಕಿ ಗೀತಾಂಜಲಿ ಮಾಹಿತಿ ನೀಡಿದರು.

---

### ಕಡೇ ಕಾರ್ತೀಕೋತ್ಸವ ಶ್ರೀ ಮತ್ತ್ಯಾಂಜನೇಯ ಸ್ವಾಮಿ ರಥೋತ್ಸವ



» **ಪರಶುರಾಂಪುರ**

ಸಮೀಪದ ಮತ್ಸಮುದ್ರ ಗ್ರಾಮದ ಶ್ರೀ ಮತ್ತಾಂಜನೇಯ ಸ್ವಾಮಿಯ ಕಡೇ ಕಾರ್ತಿಕೋತ್ಸವದ ಅಂಗವಾಗಿ ಶನಿವಾರ ಭಕ್ತರು ಶ್ರದ್ಧಾ-ಭಕ್ತಿಯಿಂದ ರಥೋತ್ಸವ ನಡೆಸಿದರು. ಸ್ವಾಮಿಯ ಮೂರ್ತಿಗೆ ಗಂಗಾಪೂಜೆ, ದೇವಸ್ಥಾನದಲ್ಲಿ ಅಭಿಷೇಕ, ಹೋಮ-ಹವನಗಳನ್ನು ನಡೆಸಿ ವಿವಿಧ ಧಾರ್ಮಿಕ ಕಾರ್ಯಗಳನ್ನು ಕೈಗೊಂಡರು ದೇಗುಲದ ಎದುರು ರಥೋತ್ಸವದ ಅಂಗವಾಗಿ ನೂತನ ರಥಕ್ಕೆ ಹರಕೆ ಹೊತ್ತವರು ಬಾಳೆಗೊನೆ, ಎಳೆನೀರುಗೊನೆ, ಮಾವಿನ ಸೊಪ್ಪು ಬಾಳೆಕಂದು, ವಿವಿಧ ಜಾತಿಯ ಹೂವುಗಳಿಂದ ರಥವನ್ನು ಅಲಂಕರಿಸಿ ಅದಕ್ಕೆ ಬಾಳೆಗೊನೆ ಕಟ್ಟಿ ರಥದ ಮೇಲೆ ಬಣ್ಣ-ಬಣ್ಣದ ಬಾವುಟಗಳನ್ನು ಕಟ್ಟಿದರು. ರಥವು ಮುಂದೆ ಸಾಗುತ್ತಿದ್ದಂತೆ ಹರಕೆ ಹೊತ್ತ ಭಕ್ತರು ರಥಕ್ಕೆ ಸೂರುಬೆಲ್ಲ, ಮಂಡಕ್ಕಿ, ಮೆಣಸು, ಬಾಳೆ, ತೆಂಗು ಎಸೆದು ತಮ್ಮ ಭಕ್ತಿ ಸಮರ್ಪಿಸಿದರು. ಮತ್ತ್ಯಾಂಜನೇಯ ಕಡೇ ಕಾರ್ತೀಕೋತ್ಸವ ಅಂಗವಾಗಿ ದೇವಸ್ಥಾನದ ಮುಂಭಾಗದ ಮುಕ್ತಿ ಭಾವಟವನ್ನ ಹಾರಜಿನಲ್ಲಿ ತಾಪಂ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ಸಮರ್ಥರಾಯ ನಾಲ್ಕು ಲಕ್ಷದ 51 ಸಾವಿರ ರೂಪಾಯಿಗಳಿಗೆ ತಮ್ಮದಾಗಿಸಿಕೊಂಡರು.ಈ ವೇಳೆ ದೇವಸ್ಥಾನ ಕಮಿಟಿಯವರು ಹಾಗೂ ಗ್ರಾಮದ ಹಿರಿಯರು ದೇವರ ಪ್ರಸಾದ ಜತೆ ಹೂಮಾಲೆ ನೀಡಿ ಗೌರವಿಸಿದರು.

---

## ಪ್ರಮುಖ ಸುದ್ದಿ

# ಡಾ.ಬಿ.ತಿಪ್ಪೇಸ್ವಾಮಿಗೆ ಟಿಕೇಟ್ ನೀಡುವಂತೆ ಪಾದಯಾತ್ರೆ

» **ಚಿತ್ರದುರ್ಗ**

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಹೊರಗಿನವರಿಗೆ ಟಿಕೇಟ್ ಬೇಡ. ಸ್ಥಳೀಯರಿಗೆ ಟಿಕೇಟ್ ನೀಡುವಂತೆ ಹೈಕಮಾಂಡ್‌ಗೆ ಒತ್ತಾಯಿಸುವುದಕ್ಕಾಗಿ ಜಿಲ್ಲೆಯಲ್ಲಿ ಪಾದಯಾತ್ರೆ ನಡೆಸುವ ಕುರಿತು ಕಾಂಗ್ರೆಸ್ ಮುಖಂಡ ಜೆಜೆ.ಹಟ್ಟಿ ಡಾ.ಬಿ.ತಿಪ್ಪೇಸ್ವಾಮಿ ಅಭಿಮಾನಿಗಳಿಂದ ಪ್ರವಾಸಿ ಮಂದಿರದಲ್ಲಿ ಸೋಮವಾರ ಪೂರ್ವಭಾವಿ ಸಭೆ ನಡೆಯಿತು.

ದೊಡ್ಡಸಿದ್ದವ್ವನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ದೇವರಾಜ್ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡುತ್ತ ಇಲ್ಲಿಯವರೆಗೂ ಚಿತ್ರದುರ್ಗ ಲೋಕಸಭಾ ಕ್ಷೇತ್ರ ಹೊರಗಿನವರ ಪಾಲಾಗುತ್ತ ಬರುತ್ತಿದೆ. ಹಾಗಾಗಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಸ್ಥಳೀಯ ಮುಖಂಡ ಜೆ.ಜೆ.ಹಟ್ಟಿಯ ಡಾ.ಬಿ.ತಿಪ್ಪೇಸ್ವಾಮಿಗೆ ಟಿಕೇಟ್ ನೀಡುವಂತೆ ಪ್ರತಿ ಹಳ್ಳಿ ಹಾಗೂ ಹೋಬಳಿ ಮಟ್ಟದಲ್ಲಿ ಪಾದಯಾತ್ರೆ ನಡೆಸಿ ಮತದಾರರನ್ನು ಜಾಗೃತಿಗೊಳಿಸಬೇಕಿದೆ ಎಂದು ಹೇಳಿದರು.



ತುರುವನೂರು ಗ್ರಾಮ ಪಂಚಾಯಿತಿ ಸದಸ್ಯ ಡಿ.ಆರ್.ಮಂಜುನಾಥ್ ಮಾತನಾಡಿ ಚಿತ್ರದುರ್ಗ ಲೋಕಸಭಾ ವ್ಯಾಪ್ತಿಗೆ ಬರುವ ಎಂಟು ಕ್ಷೇತಗಳಲ್ಲಿ ಪಾದಯಾತ್ರೆ ನಡೆಸಿ ಪಾರ್ಲಿಮೆಂಟ್ ಚುನಾವಣೆಯಲ್ಲಿ ಡಾ.ಬಿ.ತಿಪ್ಪೇಸ್ವಾಮಿಗೆ ಮತ ನೀಡಿ ಪಾರ್ಲಿಮೆಂಟ್‌ಗೆ ಕಳಿಸಿಕೊಡುವಂತೆ ಜನತೆಯಲ್ಲಿ ಮನವಿ ಮಾಡಲಾಗುವುದು ಎಂದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಪ್ರಬಲ ಸ್ಪರ್ಧಾಕಾಂಕ್ಷಿ ಜೆ.ಜೆ.ಹಟ್ಟಿ ಡಾ.ಬಿ.ತಿಪ್ಪೇಸ್ವಾಮಿ ಪಾದಯಾತ್ರೆ ಪೂರ್ವಭಾವಿ ಸಭೆ ಕುರಿತು ಮಾತನಾಡಿ ಚಿತ್ರದುರ್ಗ ಲೋಕಸಭಾ ಕ್ಷೇತ್ರವನ್ನು ಸ್ಥಳೀಯರಿಗೆ ಉಳಿಸಿಕೊಳ್ಳುವುದಕ್ಕಾಗಿ ಜ.5 ರ ನಂತರ ಪಾದಯಾತ್ರೆ ಮೂಲಕ ಹಳ್ಳಿ ಹಳ್ಳಿಗಳಿಗೆ ತಿರುಗಿ ಮತದಾರರನ್ನು ಜಾಗೃತಿಗೊಳಿಸಬೇಕಿದೆ. ಹೋಬಳಿಗಳಲ್ಲಿ ಏನು ಸಮಸ್ಯೆಗಳಿವೆ ಎನ್ನುವುದನ್ನು ಪಟ್ಟಿ ಮಾಡಿಕೊಂಡು ಜ.28 ರಂದು ಚಿತ್ರದುರ್ಗದಲ್ಲಿ ನಡೆಯುವ ಸಮಾವೇಶಕ್ಕೆ ಆಗಮಿಸುತ್ತಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಮನವಿ ಸಲ್ಲಿಸೋಣ. ಅದಕ್ಕಾಗಿ ಈಗಿನಿಂದಲೆ ನಿಮ್ಮ ನಿಮ್ಮ ವ್ಯಾಪ್ತಿಯಲ್ಲಿ ತಯಾರಿ ನಡೆಸಿ ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷರು ಮತ್ತು ಸದಸ್ಯರುಗಳಿಗೆ ಕರೆ ನೀಡಿದರು.

ಹೊರಗಿನವರು ಬಂದು ಇಲ್ಲಿ ಜನತೆಗೆ ಅಣ್ಣ ಅಪ್ಪ ಎಂದು ಕೈಮುಗಿದು ಮತ ಪಡೆದು ಗೆದ್ದ ನಂತರ ಮೋಸ ಮಾಡುತ್ತಿದ್ದಾರೆನ್ನುವುದು ಲೋಕಸಭಾ ಕ್ಷೇತ್ರದ ಮತದಾರರಿಗೆ ಹಾಗೂ ಪಕ್ಷದ ಕಾರ್ಯಕರ್ತರಿಗೆ ಗೊತ್ತಾಗಿದೆ. ಕ್ಷೇತ್ರದಲ್ಲಿ ಹದಿನೆಂಟು ಲಕ್ಷ ಮತದಾರರಿದ್ದಾರೆ. ಪಾದಯಾತ್ರೆಗೆ ಸಂಬಂಧಿಸಿದಂತೆ ತಂಡ ಸಿದ್ದವಾಗಬೇಕು. ಸ್ಥಳೀಯರಿಗೆ ಅದರಲ್ಲೂ ಮಾದಿಗರಿಗೆ ಟಿಕೇಟ್ ನೀಡಬೇಕೆಂದು ಕಾಂಗ್ರೆಸ್ ವರಿಷ್ಠರನ್ನು ಒತ್ತಾಯಿಸಿ ದಿನಕ್ಕೆ ಹತ್ತು ಕಿ.ಮೀ.ಪಾದಯಾತ್ರೆ ನಡೆಸೋಣ. ಅಲ್ಲಲ್ಲಿ ತಿಂಡಿ, ಊಟ, ವಸತಿ ವ್ಯವಸ್ಥೆ ಒದಗಿಸಲಾಗುವುದು. ಪಾದಯಾತ್ರೆಯಲ್ಲಿ ರೈತರು, ಕೃಷಿಕರು, ಕಾರ್ಮಿಕರು, ಬಡವರ ಸಮಸ್ಯೆಗಳನ್ನು ಪಟ್ಟಿಮಾಡೋಣ. ಕನಿಷ್ಟ ಒಂದು ಸಾವಿರ ಜನರಾದರೂ ಪಾದಯಾತ್ರೆಯಲ್ಲಿರಬೇಕೆಂದು ಹೇಳಿದರು.ಲಿಡ್ಕರ್ ಮಾಜಿ ಚೇರ್ಮನ್ ಓ.ಶಂಕರ್, ಹಿರೇಗುಂಟನೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಶಿವಣ್ಣ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಮಲ್ಲೇಶಣ್ಣ, ಕೃಷ್ಣಮೂರ್ತಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ಕೇಶವಣ್ಣ, ವಕೀಲರುಗಳಾದ ರುದ್ರಮುನಿ, ಮಹಲಿಂಗಪ್ಪ, ಅಧ್ಯಕ್ಷ ಕೆ.ಶಿವಮೂರ್ತಿ ಸಭೆಯಲ್ಲಿ ಭಾಗವಹಿಸಿದ್ದರು.

# ಅಧಿಕಾರ ಇದ್ದಾಗ ಸರಿಯಾಗಿ ಕೆಲಸ ಮಾಡಿಸಿ ಕ್ಷೇತ್ರದ ಋಣ ತೀರಿಸಬೇಕಿದೆ

» **ಚಿತ್ರದುರ್ಗ**

ಅಧಿಕಾರ ಇದ್ದಾಗ ಏನು ಮಾಡಲಾಗದೇ ಅಧಿಕಾರಿಗಳು ಸ್ಪಂದಿಸಲಿಲ್ಲ ಇದರಿಂದ ನಾನು ಮುಂದಿನ ಚುನಾವಣೆಯಲ್ಲಿ ಸ್ಪರ್ದೆ ಮಾಡುವುದಿಲ್ಲ ಎಂದು ಹೇಳುವುದು ಸರಿಯಾದ ಕ್ರಮವಲ್ಲ ಅಧಿಕಾರ ಇದ್ದಾಗ ಸರಿಯಾಗಿ ಕೆಲಸವನ್ನು ಮಾಡಿಸಿ ಕ್ಷೇತ್ರದ ಋಣವನ್ನು ತೀರಿಸಬೇಕಿದೆ ಎಂದು ಕೇಂದ್ರ ಸಚಿವರ ಮೇಲೆ ಕಾಂಗ್ರೇಸ್ ಮುಖಂಡ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ನೇರ್ಲಗುಂಟೆ ರಾಮಪ್ಪ ವಾಗ್ದಾಳಿಯನ್ನು ನಡೆಸಿದ್ದಾರೆ.



ಚಿತ್ರದುರ್ಗ ನಗರದ ಕಾಂಗ್ರೆಸ್ ಕಚೇರಿಯಲ್ಲಿ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು, ಕಳೆದ ನಾಲ್ಕುವರೆ ವರ್ಷದಿಂದ ಚಿತ್ರದುರ್ಗ ಕ್ಷೇತ್ರದ ಸಂಸದರಾಗಿದ್ದ ನೀವುಗಳು ಚಿತ್ರದುರ್ಗ ಹಲವಾರು ಸಮಸ್ಯೆಗಳನ್ನು ಪರಿಹಾರ ಮಾಡುವಲ್ಲಿ ವಿಫಲರಾಗಿದ್ದೀರಾ, ಜನಪ್ರತಿನಿಧಿಯಾಗಿ ಮತದಾರರ ಸಮಸ್ಯೆಗಳನ್ನು ಸಹಾ ಬಗೆಹರಿಸುವಲ್ಲಿಯೂ ಸಹಾ ಹಿನ್ನಡೆಯನ್ನು ಸಾಧಿಸಲಾಗಿದೆ. ರೈಲ್ವೆಗಳಲ್ಲಿ ಅಗತ್ಯವಾಗಿ ಬೇಕಾದ ಅಂಡರ್‌ಪಾಸ್‌ಗಳನ್ನು ಅಗತ್ಯ ಇರುವ ಕಡೆಗಳಲ್ಲಿ ನಿರ್ಮಾಣ ಮಾಡುವ ಕಾರ್ಯವನ್ನು ಕೈಗೆತ್ತಿಕೊಂಡಿಲ್ಲ ಇದರಿಂದ ಹಲವಾರು ಕಡೆಯಲ್ಲಿ ವಾಹನ ಸವಾರರು ಕಷ್ಟವನ್ನು ಅನುಭವಿಸಬೇಕಿದೆ. ಇದ್ದಲ್ಲದೆ ರಾ.ಹೆ.ಯಲ್ಲಿಯೂ ಸಹಾ ಸರಿಯಾದ ರೀತಿಯಲ್ಲಿ ಅಂಡರ್ ಪಾಸ್‌ಗಳನ್ನು ನಿರ್ಮಾಣ ಮಾಡಿಲ್ಲ, ನಿರ್ಮಾಣ ಮಾಡಿದ ಕೆಲವೆಡೆಗಳಲ್ಲಿ ಮಳೆ ಬಂದಾಗ ನೀರು ನಿಂತು ವಾಹನ ಸವಾರರು ಹೋಗಲು ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಇದರ ಬಗ್ಗೆ ನಿಮಗೆ ಅರಿವು ಇಲ್ಲವೇ ಎಂದು ಸಚಿವರನ್ನು ಪ್ರಶ್ನಿಸಿದರು.

ಕ್ಷೇತ್ರ ಸಂಸದರಾಗಿ ಸಚಿವರಾಗಿ ಕ್ಷೇತ್ರವನ್ನು ಅಭೀವೃದ್ದಿ ಮಾಡುವ ಯಾವ ಕೆಲಸವನ್ನು ಸಹಾ ನಿಮ್ಮ ಅಧಿಕಾರದ ಅವಧಿಯಲ್ಲಿ ಮಾಡಿಲ್ಲ, ಈಗಾಗಲೇ ನಾಲ್ಕುವರೆ ವರ್ಷ ಕಳೆದಿದೆ ಉಳಿದ ಕೆಲವು ತಿಂಗಳಲ್ಲಾದರು ಉತ್ತಮವಾದ ಕೆಲಸವನ್ನು ಮಾಡಿ ಎಂದ ಅವರು ನನ್ನ ಅವಧಿಯಲ್ಲಿ ಅಧಿಕಾರಿಗಳು ಸರಿಯಾದ ರೀತಿಯಲ್ಲಿ ಸ್ಪಂದಿಸಿಲ್ಲ ಇದರಿಂದ ಕೆಲಸ ಮಾಡಲಾಗಿಲ್ಲ ಅಲ್ಲದೆ ಮುಂದಿನ ಚುನಾವಣೆಯಲ್ಲಿ ನಾನು ಇಲ್ಲಿಂದ ಸ್ಪರ್ದೆ ಮಾಡುವುದಿಲ್ಲ ಎಂದು ಹೇಳುವುದರ ಮೂಲಕ ಪಲಾನಯನವನ್ನು ಮಾಡುತ್ತಿರುವುದು ಸರಿಯಲ್ಲ, ಇದ್ದಾಗ ಉತ್ತಮವಾದ ಕೆಲಸವನ್ನು ಮಾಡಬೇಕಿದೆ. ಆಗ ಮತದಾರರಿಗೆ ಸಂತೋಷವಾಗುತ್ತದೆ. ಇದರ ಬಗ್ಗೆ ಆಲೋಚನೆಯನ್ನು ಮಾಡಬೇಕಿದೆ ಎಂದು ರಾಮಪ್ಪ ಕಿವಿ ಮಾತು ಹೇಳಿದರು.

ಅರಣ್ಯ ಇಲಾಖೆಯಲ್ಲಿ 5500 ರೈತರರು ಜಮೀನಿಗಾಗಿ ಅರ್ಜಿಯನ್ನು ಸಲ್ಲಿಸಿದ್ದು ಇದರಲ್ಲಿ 300 ಅರ್ಜಿಗಳನ್ನು ಮಾತ್ರವೇ ವಿಲೇವಾರಿ ಮಾಡಲಾಗಿದೆ ಇನ್ನೂ 5200 ಅರ್ಜಿಗಳು ಬಾಕಿ ಇವೆ. ಇದನ್ನು ವಿಲೇವಾರಿ ಮಾಡುವಲ್ಲಿ ಸಚಿವರು ಸೋತ್ತಿದ್ದಾರೆ. ಅಧಿಕಾರಿಗಳನ್ನು ಸರಿಯಾದ ರೀತಿಯಲ್ಲಿ ಹಿಡಿತದಲ್ಲಿ ಇಟ್ಟುಕೊಳ್ಳಲಾಗಿಲ್ಲ, ಗಣಿಭಾದಿತ ಪ್ರದೇಶಗಳಲ್ಲಿ ಯಾವುದೇ ರೀತಿಯ ಅಭೀವೃದ್ದಿಯನ್ನು ಮಾಡಿಲ್ಲ, ಆರೋಗ್ಯ ಮತ್ತು ಶಿಕ್ಷಣಕ್ಕೆ ಒತ್ತು ನೀಡಬೇಕಿತ್ತು ಆದರೆ ಇದರ ಬಗ್ಗೆ ಗಮನ ನೀಡದೇ ಕಟ್ಟಡಗಳನ್ನು ನಿರ್ಮಾಣ ಮಾಡುವಲ್ಲಿ ಮುಂದಾಗಿರುವುದು ಸರಿಯಲ್ಲ, ಬಿಜೆಪಿ ಎಲ್ಲಾ ಜಾತಿ ಧರ್ಮದವರನ್ನು ಸರಿಯಾದ ರೀತಿಯಲ್ಲಿ ತೆಗೆದುಕೊಂಡು ಹೋಗದೇ ಅವರಲ್ಲಿ ಒಡಕನ್ನು ಉಂಟು ಮಾಡುವ ಕೆಲಸವನ್ನು ಮಾಡುತ್ತಿದೆ. ರಾಮಮಂದಿರ ಉದ್ಘಾಟನೆಮಾಡಿಹಿಂದುಧರ್ಮದವರನ್ನು ಎತ್ತಿಕಟ್ಟುವ ಕೆಲಸವನ್ನು ಮಾಡುತ್ತಿದೆ. ರಾಮ ಬರೀ ಅಯೋಧ್ಯಯಲ್ಲಿಯೇ ಇಲ್ಲ ಎಲ್ಲ ಕಡೆಯಲ್ಲಿಯೂ ಸಹಾ ಇದ್ದಾನೆ ಎಲ್ಲರ ಮನದಲ್ಲಿಯೂ ಸಹಾ ಇದ್ದಾನೆ ರಾಮ ಬರೀ ಬಿಜೆಪಿಯ ಸೋತ್ತಲ್ಲ ಎಲ್ಲರ ದೇವರು ಎಂದರು.

ಕರ್ನಾಟಕ ಜಿಎಸ್.ಟಿ.ಯನ್ನು ನೀಡುವಲ್ಲಿ 4ನೇ ಸ್ಥಾನವನ್ನು ಪಡೆದಿದೆ ಆದರೆ ಅದನ್ನು ಮರಳಿ ನೀಡುವಲ್ಲಿ ಕೇಂದ್ರ ಸರ್ಕಾರ ಹಿನ್ನಡೆಯಾಗಿದೆ ನಮಗೆ ಬದಲಿಗೆ ಗುಜರಾತ್‌ಗೆ ಹೆಚ್ಚಿನ ಅದ್ಯತೆಯನ್ನು ನೀಡಲಾಗುತ್ತಿದೆ. ಇದು ಕೇಂದ್ರ ಸರ್ಕಾರ ಮಾಡುತ್ತಿರುಚವ ಮಲತಾಯಿ ಧೋರಣೆಯಾಗಿದೆ. ರಾಜ್ಯದಿಂದ ಆಯ್ಕೆಯಾದ ಚುನಾಯಿತ ಪ್ರತಿನಿಧಿಗಳಲ್ಲಿ ಮೂರು ಜನ ಮಂತ್ರಿಗಳಿದ್ದು 25 ಜನ ಸಂಸದರಿದ್ದಾರೆ ಅವರಾರು ಸಹಾ ಮೋದಿಯ ಮುಂದೆ ಧ್ವನಿ ಎತ್ತುತ್ತಿಲ್ಲ. ನಮ್ಮ ಹೈಕಮಾಂಡ್ ಚಿತ್ರದುರ್ಗ ಕ್ಷೇತ್ರಕ್ಕೆ ಯಾರಿಗೆ ಟಿಕೆಟ್ ನೀಡುತ್ತಾರೂ ಅವರನ್ನು ಕಾಂಗ್ರೆಸ್ ಪಕ್ಷ ಬೆಂಬಲಿಸಲಿದೆ ಅವರನ್ನು ಗೆಲುವುದಕ್ಕೆ ಸಹಾಯವನ್ನು ಮಾಡಲಾಗುವುದು ಎಂದರು.

ಇದೇ ಸಂದರ್ಭದಲ್ಲಿ 2024ರ ಹೊಸ ವರ್ಷದ ಅಂಗವಾಗಿ ಕಾಂಗ್ರೆಸ್ ಕಚೇರಿಯಲ್ಲಿ ನೆರದಿದ್ದವರೆಲ್ಲಾ ಸೇರಿ ಕೇಕ್ ಕಟ್ ಮಾಡುವುದರ ಮೂಲಕ ನೂತನ ವರ್ಷವನ್ನು ಬರ ಮಾಡಿಕೊಂಡರು.

ಗೋಷ್ಠಿಯಲ್ಲಿ ಡಿಸಿಸಿ ಅಧ್ಯಕ್ಷ ತಾಜ್‌ಪೀರ್, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್, ಮೈಲಾರಪ್ಪ, ಉಪಾಧ್ಯಕ್ಷರಾದ ನಜ್ಮಾತಾಜ್, ಯಶವಂತ, ಮುದಸಿರ್ ಶಬ್ಬೀರ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ರೈತರಿಗೆ ಸೂಕ್ತ ಬೆಳೆ ವಿಮಾ ಪರಿಹಾರ ನೀಡುವಂತೆ ಒತ್ತಾಯಿಸಿ, ರೈತ ಸಂಘದ ವತಿಯಿಂದ ಪ್ರತಿಭಟನೆ

» **ಹಿರಿಯೂರು**

ತಾಲೂಕಿನಲ್ಲಿ ಅಡಿಕೆ, ದಾಳಿಂಬೆ, ಮಾವು ಮೊದಲಾದ ತೋಟಗಾರಿಕಾ ಬೆಳೆಗಳು ಅತಿವೃಷ್ಟಿಯಿಂದಾಗಿ, ತಗ್ಗು ಪ್ರದೇಶದಲ್ಲಿನ ಹಲವು ತೋಟಗಳಲ್ಲಿ ನೀರು ನಿಂತು ತೋಟದ ಬೆಳೆಗಳು ಕೊಳೆತು ಹೋಗಿವೆ, ರೈತರು ಪ್ರತಿ ಹೆಕ್ಟೇರ್ ಗೆ 7,700 ರೂ ವಿಮಾಕಂತು ಪಾವತಿಸಿದ್ದರು. ವಿಮಾ ಕಂತು ಪಾವತಿಸಿರುವ ರೈತರಿಗೆ ಸೂಕ್ತ ಬೆಳೆ ವಿಮಾ ಪರಿಹಾರ ನೀಡಬೇಕು ಎಂಬುದಾಗಿ ತಾಲ್ಲೂಕು ರೈತ ಸಂಘದ ಅಧ್ಯಕ್ಷರಾದ ಕೆ.ಟಿ.ತಿಪ್ಪೇಸ್ವಾಮಿ ಒತ್ತಾಯಿಸಿದರು.



ನಗರದ ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿ ಮುಂದೆ ಗುರುವಾರ ರೈತಸಂಘ ಮತ್ತು ಹಸಿರುಸೇನೆ ತಾಲ್ಲೂಕು ಘಟಕದ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ವಿಮಾ ಕಂಪನಿಯವರು ಹೆಕ್ಟೇರ್ ಗೆ ಕೇವಲ 2, 580 ರೂ ಪರಿಹಾರ ನೀಡುವ ಮೂಲಕ ರೈತರಿಗೆ ವಂಚಿಸಿದ್ದಾರೆ. ಅಧಿಕಾರಿಗಳು ಹಾಗೂ ವಿಮಾ ಕಂಪನಿ ಮಾಲೀಕರ ಒಳಸಂಚಿನಿಂದ ರೈತರಿಗೆ ಕೊಡಬೇಕಾದ ಸರ್ಕಾರದ ಅನುದಾನ ವಿಮಾ ಕಂಪನಿಯ ಪಾಲಾಗಿದೆ' ಎಂಬುದಾಗಿ ಪ್ರತಿಭಟನಕಾರರು ಆರೋಪಿಸಿದರು.

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿಯಲ್ಲಿ ಹನಿ ನೀರಾವರಿ ಒಳಗೊಂಡು ವಿವಿಧ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಜಿಲ್ಲೆಯಾದ್ಯಾಂತ ರೈತರ ಹೆಸರಿನಲ್ಲಿ ಹನಿನೀರಾವರಿ ಕಂಪನಿಗಳು, ಇಲಾಖೆ ಅಧಿಕಾರಿಗಳ ಶಾಮೀಲಿನೊಂದಿಗೆ ನಕಲಿ ಬಿಲ್ ಸೃಷ್ಟಿಸಿ ಸರ್ಕಾರದ ಹಣವನ್ನು ಲಪಟಾಯಿಸಲಾಗಿದೆ ಎಂಬುದಾಗಿ ಅವರು ಆಗ್ರಹಿಸಿದರು.ಅಷ್ಟೇ ಅಲ್ಲದೆ ಸರ್ಕಾರದ ಎನ್ ಎಚ್ ಎಂ ಯೋಜನೆಯಡಿಯಲ್ಲಿ ರೈತರ ಬೆಳೆಗಳಿಗೆ ಸಬ್ಸಿಡಿ ಮತ್ತು ಪರಿಕರಗಳ ಸಬ್ಸಿಡಿ ನೀಡುವಲ್ಲಿಯೂ ನಮ್ಮ ರೈತರಿಗೆ ವಂಚನೆ ಮಾಡಲಾಗಿದೆ, ಈ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮಕೈಗೊಳ್ಳಬೇಕು ಎಂಬುದಾಗಿ ರೈತಮುಖಂಡರು ಆರೋಪಿಸಿದರು.

ಈ ಸಂದರ್ಭದಲ್ಲಿ ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕರು ಮಾತನಾಡಿ, ಜನವರಿ 4ರಂದು ವಿಮಾಕಂಪನಿಯ ವ್ಯವಸ್ಥಾಪಕ ನಿರ್ದೇಶಕರು, ಇಲಾಖೆ ಅಧಿಕಾರಿಗಳು ಹಾಗೂ ರೈತರೊಂದಿಗೆಸಭೆನಡೆಸಲಾಗುವುದುಎಂಬುದಾಗಿ ಪ್ರತಿಭಟನಾಕಾರರಿಗೆ ಭರವಸೆ ನೀಡಿದ್ದರಿಂದ ಪ್ರತಿಭಟನೆಯನ್ನು ಹಿಂಪಡೆಯಲಾಯಿತು.

## ರಾಮ ಮಂದಿರ ಮಂತ್ರಾಕ್ಷತೆಯನ್ನು ಹಂಚಿದ ಬಿಜೆಪಿ ಮುಖಂಡರು



» **ಚಿತ್ರದುರ್ಗ**

ಇದೇ ತಿಂಗಳ 22 ರಂದು ಅಯೋಧ್ಯೆಯಲ್ಲಿ ಉದ್ಘಾಟನೆಯಾಗಲಿರುವ ರಾಮ ಮಂದಿರದ ಮಂತ್ರಾಕ್ಷತೆಯನ್ನು ನಗರದ ವಿ.ಪಿ.ಬಡಾವಣೆ ಹಾಗೂ ಜೆಸಿಆರ್.ಬಡಾವಣೆಯಲ್ಲಿ ಸೋಮವಾರ ಮನೆ ಮನೆಗೆ ಹಂಚಲಾಯಿತು. ಬಿಜೆಪಿ.ಯುವ ಮುಖಂಡ ಭೀಮಸಮುದ್ರದ ಜಿ.ಎಸ್.ಅನಿತ್‌ಕುಮಾರ್ ಈ ವೇಳೆ ಮಾತನಾಡಿ ಜ.22 ರಂದು ಮನೆಗಳ ಮುಂದೆ ಉತ್ತರ ದಿಕ್ಕಿನಲ್ಲಿ ಐದು ದೀಪಗಳನ್ನು ಹಚ್ಚುವ ಮೂಲಕ ರಾಮಮಂದಿರ ಉದ್ಘಾಟನೆಗೆ ಭಕ್ತಿ ಅರ್ಪಿಸಬೇಕೆಂದು ವಿನಂತಿಸಿದರು. ಬಿಜೆಪಿ.ಜಿಲ್ಲಾಧ್ಯಕ್ಷ ಎ.ಮುರಳಿ, ಯುವ ಮುಖಂಡರುಗಳಾದ ಡಾ.ಸಿದ್ದಾರ್ಥ, ಎಂ.ಸಿ.ರಘುಚಂದನ್, ಬಿಜೆಪಿ.ನಗರಾಧ್ಯಕ್ಷ ನವೀನ್ ಚಾಲುಕ್ಯ, ನಗರಸಭೆ ಸದಸ್ಯೆ ಶ್ರೀಮತಿ ರೋಹಿಣಿ ಚಾಲುಕ್ಯ, ಮುರುಗೇಶ್‌ಗೌಡ್ರು, ಭಾರ್ಗವಿ ದ್ರಾವಿಡ್ ಇನ್ನು ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.

**ಪ್ರಮುಖ ಸುದ್ದಿ**

# ಸಾರ್ವಜನಿಕ ಶೌಚಾಲಯಗಳಿಗೆ ಹೈಟೆಕ್ ಸ್ಪರ್ಶ

» **ಹಿರಿಯೂರು**

ನಗರದಲ್ಲಿ ಸಾರ್ವಜನಿಕ ಶೌಚಾಲಯಕ್ಕೆ ಹೈಟೆಕ್ ಸ್ಪರ್ಶದ ಜೊತೆಗೆ ಅದರ ಅದರ ಅಂಧ ಹೆಚ್ಚಿಸುವ ಕಾರ್ಯಬರದಿಂದ ಸಾಗುತ್ತಿದ್ದು, ಖಾಸಗಿ ಬಸ್ ನಿಲ್ದಾಣದ ಶೌಚಾಲಯವನ್ನು ಸ್ವಚ್ಛಗೊಳಿಸಿ ಸಾರ್ವಜನಿಕರ ಮನಸೆಳೆಯಲು ಶೌಚಾಲಯದ ಒಳಗಡೆ ಮತ್ತು ಹೊರಗಡೆ ವಿವಿಧರೀತಿಯ ಸುಂದರವಾದ ಚಿತ್ರಗಳನ್ನು ಬರೆಸುವುದರ ಮೂಲಕ ನಗರದ ಶೌಚಾಲಯಗಳಿಗೆ ಸ್ಪರ್ಶಮಾಂತ್ರಿಕ ಎಂದೇ ಪ್ರಸಿದ್ಧರಾದ ನಗರಸಭೆ ಪೌರಾಯುಕ್ತ ಮಹಂತೇಶ್ ಮೆರುಗು ನೀಡಿದ್ದಾರೆ.




ಸಾರ್ವಜನಿಕರ ಶೌಚಗೃಹಗಳು ಅಸ್ವಚ್ಛತೆಯ ತಾಣ ಎಂಬ ಅಭಿಪ್ರಾಯ ಸರ್ವೇಸಾಮಾನ್ಯವಾಗಿದ್ದು, ಇದೇ ಕಾರಣಕ್ಕೆ ಬಹಳಷ್ಟು ನಗರದಲ್ಲಿ ಇವುಗಳನ್ನು ತೆರವುಗೊಳಿಸಲಾಗಿದೆ, ಆದರೆ ಹಿರಿಯೂರು ನಗರದ ಖಾಸಗಿ ಬಸ್ ನಿಲ್ದಾಣದ ಶೌಚಾಲಯದ ಗೋಡೆಗಳನ್ನು ಬಣ್ಣಬಣ್ಣದ ಚಿತ್ತಾರಗಳಿಂದ ಅಲಂಕರಿಸುವ ಮೂಲಕ ಬಸ್ ನಿಲ್ದಾಣಕ್ಕೆ ಬರುವ ಪ್ರಯಾಣಿಕರ ಕಣ್ಣಿಗೆ ಕಂಗೊಳಿಸುವಂತೆ ಮಾಡಲಾಗಿದೆ. ದಕ್ಷಿಣಕಾಶಿ ಎಂದೇ ಪ್ರಸಿದ್ಧವಾದ ಹಿರಿಯೂರು ನಗರದ ಸೌಂದರ್ಯ ಹೆಚ್ಚಿಸಲು ನಗರಸಭೆ ಈ ವಿಶೇಷ ಯೋಜನೆ ರೂಪಿಸಿದ್ದು, ರಾಜಕಾಲುವೆ ಒತ್ತುವರಿ ತೆರವು, ಪಾರ್ಕ್ ಗಳ ಅಭಿವೃದ್ಧಿ, ಸ್ವಚ್ಛತೆ, ವೇದಾವತಿ ಎಡಬಲದಂಡೆ ಕಾಲುವೆಗಳಿಗೆ ಕಸ ಹಾಕದಂತೆ ತಡೆಗೋಡೆ , ಶೌಚಗೃಹದ ಗೋಡೆ, ರಾಷ್ಟ್ರೀಯ ಹೆದ್ದಾರಿ ಅಂಡರ್ ಪಾಸ್ ಗೋಡೆಗಳ ಸೌಂದರ್ಯ ಹೆಚ್ಚಿಸಲು ಗೋಡೆಬರಹ, ಸೇರಿದಂತೆ ಬಣ್ಣಬಣ್ಣದ ಚಿತ್ತಾರ ಬಿಡಿಸುವ ಮೂಲಕ ನಗರವನ್ನು ಆಕರ್ಷಕಗೊಳಿಸುವ ಕಾರ್ಯದಲ್ಲಿ ತೊಡಗಿದೆ. ಹೀಗೆ ನಗರದ ಸಮಗ್ರ ಅಭಿವೃದ್ಧಿಗಾಗಿ ನಗರಸಭೆ ಮಾಸ್ಟರ್ ಪ್ಲಾನ್ ರೂಪಿಸಿದ್ದು, ನಗರದಲ್ಲಿನ ಸ್ವಚ್ಛತೆ ಜೊತೆಗೆ ಸಾರ್ವಜನಿಕ ಶೌಚಗೃಹಗಳ ಅಂದ ಹೆಚ್ಚಿಸುವ ಕೆಲಸ ಆರಂಭಿಸಲಾಗಿದೆ, ನಗರದ ಹೃದಯ ಭಾಗದಲ್ಲಿರುವ ಖಾಸಗಿ ಬಸ್ ನಿಲ್ದಾಣದ ಆವರಣದಲ್ಲಿನ ಸಾರ್ವಜನಿಕ ಶೌಚಗೃಹದ ಗೋಡೆಯ ಮೇಲೆ ಕಲಾವಿದರ ಕುಂಚದಿಂದ ಅರಳಿದ ಚಿತ್ರಗಳು ನಗರದ ಜನರ ಗಮನ ಸೆಳೆಯುತ್ತಿವೆ. ನಗರದ ಸ್ವಚ್ಛತೆ, ತ್ಯಾಜ್ಯ ನಿರ್ವಹಣೆ, ಸುಂದರ ನಗರದ ನಿರ್ಮಾಣ ಮಾಡುವಲ್ಲಿ ನಗರದ ಅಭಿವೃದ್ಧಿ ಕುರಿತಂತೆ ವಿನೂತನ ಕಾರ್ಯಕ್ರಮಗಳನ್ನು ರೂಪಿಸಿರುತ್ತಿರುವ ಹಿನ್ನೆಲೆಯಲ್ಲಿ ಹಿರಿಯೂರು ನಗರಸಭೆ ಜನಮನ್ನನೆ ಪಡೆದಿದ್ದು, ನಗರಸಭೆ ಪೌರಾಯುಕ್ತರಾದ ಹೆಚ್.ಮಹಂತೇಶ್ ರವರ ಸೃಜನಶೀಲ ಚಟುವಟಿಕೆಗಳು ಹಾಗೂ ಕಾರ್ಯವೈಖರಿಗೆ ಸಾರ್ವಜನಿಕರು ಅತ್ಯಂತ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ.

ನಗರದ ಖಾಸಗಿ ಬಸ್ ನಿಲ್ದಾಣದಲ್ಲಿ, ಸರ್ಕಾರಿ ಶಾಲೆ ಮೈದಾನದಲ್ಲಿ ಹಾಗೂ ಬಸ್ ನಿಲ್ದಾಣದ ಅಕ್ಕಪಕ್ಕದ ಜಾಗದಲ್ಲಿ ಸಾರ್ವಜನಿಕರು ದಿನನಿತ್ಯ ಮಲಮೂತ್ರ ವಿಸರ್ಜನೆ ಮಾಡುತ್ತಿರುವುದನ್ನು ಗಮನಿಸಿ, ತರಕಾರಿ ಮಾರ್ಕೆಟ್ ಹಾಗೂ ಗಾಂಧಿವೃತ್ತ ಸೇರಿದಂತೆ ನಗರದ ಎಲ್ಲಾ ಶೌಚಾಲಯಗಳನ್ನು ಸ್ವಚ್ಛಗೊಳಿಸಿ, ಸುಂದರವಾಗಿ ವಿನ್ಯಾಸಗೊಳಿಸಿ, ಸಾರ್ವಜನಿಕರ ಉಪಯೋಗಕ್ಕೆ ಅವಕಾಶ ಮಾಡಿಕೊಡಲಾಗಿದೆ.

ನಗರಸಭೆ ಪೌರಾಡಳಿತ ಇಲಾಖೆ ನಿರ್ದೇಶನದಂದೆ ಸ್ವಚ್ಛ ಶೌಚಾಲಯ ನಿರ್ಮಿಸುವ ಮೂಲಕ ಸಾರ್ವಜನಿಕರ ಗಮನ ಸೆಳೆದಿದ್ದಾರೆ, ಸಾರ್ವಜನಿಕರ ಹಿತ ದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು, ನಗರದ ಆರು ಶೌಚಾಲಯಗಳನ್ನು ಸ್ವಚ್ಛ ಹಾಗೂ ಸುಂದರಗೊಳಿಸಲಾಗಿದೆ, ಈ ರೀತಿ ನಗರದಲ್ಲಿ ಅತ್ಯುತ್ತಮ ಕೆಲಸ ನಿರ್ವಹಿಸುತ್ತಿರುವ ನಗರಸಭೆ ಪೌರಾಯುಕ್ತ ಹೆಚ್,ಮಹಂತೇಶ್ ರಂತಹ ದಕ್ಷ ಹಾಗೂ ಸೃಜನಶೀಲಅಧಿಕಾರಿಗಳಿಗೆಸಾರ್ವಜನಿಕರು ಸ್ಪೂರ್ತಿತುಂಬಬೇಕಾಗಿದೆ.

**ಫಾಸ್ಟ್ ನ್ಯೂಸ್**

## ವಲಸೆ ಶ್ರೀವೀರಭದ್ರಸ್ವಾಮಿ ಕಾರ್ತೀಕ ದೀಪೋತ್ಸವ ಯಶಸ್ವಿ ಮುಕ್ತಾಯ : ನೂರಾರು ಭಕ್ತರು ಬಾಗಿ.



» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ವಲಸೆ ಗ್ರಾಮದ ಶ್ರೀವೀರಭದ್ರೇಶ್ವರಸ್ವಾಮಿಯ ಕಾರ್ತಿಕದೀಪೋತ್ಸವ, ರಥೋತ್ಸವ ಹಾಗೂ ಅಗ್ನಿಕುಂಡ ಕಾರ್ಯಕ್ರಮಗಳು ಎಲ್ಲ ಭಕ್ತರ ಸಹಕಾರದಿಂದ ಯಶಸ್ವಿಯಾಗಿ ನಡೆದವು. ಈ ಸಂದರ್ಭದಲ್ಲಿ ಮಾತನಾಡಿದ ದೇವಸ್ಥಾನದ ಪೂಜಾರ್ ಅಜ್ಜಪ್ಪ, ಪ್ರತಿವರ್ಷದಂತೆ ಈ ವರ್ಷವೂ ನೂರಾರು ಭಕ್ತರ ಸಹಕಾರದಿಂದ ಶ್ರೀವೀರಭದ್ರಸ್ವಾಮಿಯ ಕಾರ್ತಿಕ ದೀಪೋತ್ಸವಭಕ್ತಿ ಮತ್ತು ಸಂಭ್ರಮದಿಂದ ನಡೆದಿದೆ. ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಮಂಗಳವಾದ್ಯಗಳೊಂದಿಗೆ ಮೆರವಣಿಗೆ ನಡೆಸಲಾಯಿತು. ಮೆರವಣಿಗೆಯಲ್ಲಿ ವೀರಗಾಸೆ, ಕರಡಿಸಮಾಳ, ನಂದಿಕೋಲು ಕುಣಿತ, ಕೋಲಾಟ ಮುಂತಾದವುಗಳ ಪ್ರದರ್ಶಗಳು ಜನರ ಮನಸೆಳೆದವು. ಪ್ರತಿವರ್ಷದಂತೆ ಈ ವರ್ಷವೂ ಶ್ರೀಸ್ವಾಮಿಯ ಮುಕ್ತಿಬಾವುಟವನ್ನು ಸಾರ್ವಜನಿಕರವಾಗಿ, ಭಕ್ತರ ಸಮ್ಮುಖದಲ್ಲಿ ಹರಾಜು ಮಾಡಲಾಯಿತು. ಚಳ್ಳಕೆರೆಯ ಬೆಸ್ಕಾಂ ಇಲಾಖೆ ಅಧಿಕಾರಿ ಸಿ.ನಾಗರಾಜು 26001ರೂಗೆ ಮುಕ್ತಿಬಾವುಟ ಪಡೆದುಕೊಂಡರು. ಗ್ರಾಮ ಪಂಚಾಯಿತಿ ಸದಸ್ಯ ಲೋಕೇಶ್, ಮುಖಂಡರಾದ ತಿಪ್ಪೇಸ್ವಾಮಿ, ಮೈಲನಹಳ್ಳಿ ಚಂದ್ರಪ್ಪ, ದಿನೇಶ್, ನಾಗಿರೆಡ್ಡಿ,ಚನ್ನಗಾನಹಳ್ಳಿ ಮಲ್ಲೇಶ್ ಮುಂತಾದವರು ಉಪಸ್ಥಿತರಿದ್ದರು.

## ಬ್ಯಾಂಕ್‌ನ ಅಭಿವೃದ್ಧಿಯ ಬಗ್ಗೆ ನಿರ್ದೇಶಕರು, ಸಿಬ್ಬಂದಿ ಸಹಕರಿಸಲಿ



» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ತಾಲ್ಲೂಕಿನ ರೈತರು, ಕಾರ್ಮಿಕರು, ವಾಣಿಜ್ಯೋದ್ಯಮಿಗಳು ಹಾಗೂ ಸಣ್ಣಪುಟ್ಟ ವ್ಯಾಪಾರಿಗಳಿಗೆ ಆರ್ಥಿಕ ನೆರವು ನೀಡುವಲ್ಲಿ ವೀರಶೈವ ಸೌಹಾರ್ದ ಪತ್ತಿನ ಸಹಕಾರ ಸಂಘ ಮುಂದಾಗಿದೆ ಎಂದು ಬ್ಯಾಂಕ್ ಅಧ್ಯಕ್ಷ ಎಸ್.ಜಯಪ್ರಕಾಶ್ ತಿಳಿಸಿದರು. ಅವರು, ಹೊಸವರ್ಷದ ಹಿನ್ನೆಲೆಯಲ್ಲಿ ಬ್ಯಾಂಕ್‌ನ ಕಚೇರಿಯಲ್ಲಿ ಪ್ರಸ್ತುತ 2024ರ ನೂತನ ಕ್ಯಾಲೆಂಡರ್ ಬಿಡುಗಡೆ ಹಾಗೂ ಬ್ಯಾಂಕ್‌ನ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಸಹಕಾರಿ ಕ್ಷೇತ್ರ ಇಂದು ನಿರೀಕ್ಷೆಗೂ ಮೀರಿ ಉತ್ತಮವಾಗಿ ಅಭಿವೃದ್ಧಿಯತ್ತ ದಾಪುಗಾಲಿಡುತ್ತಿದೆ. ಬ್ಯಾಂಕ್‌ನಿಂದ ನೀಡಲಾಗುವ ಸಾಲಗಳು ಸಕಾಲದಲ್ಲಿ ಮರುಪಾವತಿಯಾಗದೆ ಇನ್ನೂ ಹೆಚ್ಚಿನ ಅಭಿವೃದ್ಧಿ ದಾಖಲಿಸಲು ಸಾಧ್ಯವಾಗುತ್ತದೆ. ಬ್ಯಾಂಕ್‌ನ ಎಲ್ಲಾ ನಿರ್ದೇಶಕರು, ಸಿಬ್ಬಂದಿ ವರ್ಗ ಸಹಕಾರ ನೀಡುವಂತೆ ವಿನಂತಿಸಿದರು. ಉಪಾಧ್ಯಕ್ಷ ಕೆ.ನಾಗೇಶ್, ನಿರ್ದೇಶಕರಾದ ಎನ್.ಎಚ್.ವಾಸುದೇವ್, ಪಿ.ಸಿದ್ದಲಿಂಗಮೂರ್ತಿ, ಎಂ.ಪಿ.ತಿಪ್ಪೇಸ್ವಾಮಿ, ವೃಷಬೇಂದ್ರಪ್ಪ, ವೇದಮೂರ್ತಿ, ಶಾಂತವೀರಮ್ಮ, ಎಚ್.ಎಸ್.ಲತಾ, ಶಿವಪುತ್ರಪ್ಪ, ಎ.ಮಂಜುನಾಥ, ವಂದನರಾಜು, ಬ್ಯಾಂಕ್ ವ್ಯವಸ್ಥಾಪಕ ತಿಪ್ಪೇಸ್ವಾಮಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಹೊಸವರ್ಷದ ಸಂಭ್ರಮಾಚರಣೆ

» **ಹಿರಿಯೂರು**

ಕಳೆದ 2023 ನೇ ವರ್ಷದ ಕಹಿ ನೆನಪುಗಳನ್ನೆಲ್ಲಾ ಮರೆತು, ಕೇವಲ ಸಿಹಿನೆನಪುಗಳನ್ನು ಮಾತ್ರ ಮೆಲುಕು ಹಾಕುವ ಮೂಲಕ ಇಂದಿನ 2024 ರ ಹೊಸವರ್ಷವನ್ನು ನಾವೆಲ್ಲರೂ ಸಡಗರ ಸಂಭ್ರಮಗಳಿಂದ ಸ್ವಾಗತಿಸೋಣ ಎಂಬುದಾಗಿ ವಾಣಿವಿಲಾಸ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಆಲೂರು ಹನುಮಂತರಾಯಪ್ಪ ಹೇಳಿದರು.

ನಗರದ ವಾಣಿವಿಲಾಸ ವಿದ್ಯಾಸಂಸ್ಥೆಯ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ 2024ರ ಹೊಸವರ್ಷದ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಗಿಡಕ್ಕೆ ನೀರು ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಹೊಸವರ್ಷವು ಎಲ್ಲರ ಜೀವನದಲ್ಲೂ ಸುಖಶಾಂತಿ ನೆಮ್ಮದಿಯನ್ನು ನೀಡುವ ಜೊತೆಗೆ ಆರೋಗ್ಯ ಆಯಸ್ಸನ್ನು ಕೊಟ್ಟು ಕಾಪಾಡಲಿ ಎಂಬುದಾಗಿ ಶುಭಹಾರೈಸಿದರಲ್ಲದೆ, ಮುಂಬರುವ ವಾರ್ಷಿಕ ಪರೀಕ್ಷೆಗೆ ಈಗಿನಿಂದಲೇ ಅಭ್ಯಾಸ ಮಾಡುವ ಮೂಲಕ ಪರೀಕ್ಷೆಯಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸುವತ್ತ ನಿಮ್ಮ ಗಮನವನ್ನು ಹರಿಸಬೇಕು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T